ಬೆಂಗಳೂರು,
ಕೋಲಾರ,
ಹಾಸನ,
ಚಿತ್ರದುರ್ಗ,
ದಾವಣಗೆರೆ,
ವಿಜಯನಗರ,
ಬಳ್ಳಾರಿ,
ರಾಯಚೂರು,
ವಿಜಯಪುರ,
ಕಲಬುರ್ಗಿ

ದಶಕದ ನಡಿಗೆ...
RNI No: KARKAN/2014/54928
ನೊಂದವರ ಧ್ವನಿ

# ಸಹಾಯ ವಾಣಿ

www.sahayavani.com
SAHAYAVANI
Postal Registration N.o KA/BGW--1862/2024-26
KANNADA DAILY PAPER
ಕನ್ನಡ ದಿನಪತ್ರಿಕೆ

ಸಂಪುಟ: 11
Vol:11
ಸಂಚಿಕೆ: 141
Issuse:141
ದಿನಾಂಕ:07-07-2024
Date:07-07-2024
ರವಿವಾರ Sunday
ಪುಟ:4 Page:4
ರೂ.: 3-00 Rs.3-00

ಸಂಪಾದಕರು: ಎಸ್.ಕೆ.ಒಡೆಯರ್ ಉಪಸಂಪಾದಕರು: ಸುಚಿತ್ರ ಎಸ್. ಒಡೆಯರ್ ಎಂಬಿಎ ಗೌರವ ಸಂಪಾದಕರು: ಗುರುರಾಜು ಎಂ., ಫೋ: 080-31212322 ಮೊ.: 9902543494 E-mail:sahayavany@gmail.com

# ರಾಜ್ಯದಲ್ಲಿ ಡೆಂಗ್ಯೂ ಉಲ್ಬಣ

## ಬೆಂಗಳೂರಿನಲ್ಲಿ ಡೆಂಗ್ಯೂನಿಂದ ಬಾಲಕ ಸಾವು, ಝಿಕಾ ಸೋಂಕಿನ ಆತಂಕ



ಬೆಂಗಳೂರು:-

ರಾಜ್ಯದ ಹಲವೆಡೆ ಡೆಂಗ್ಯು ಜ್ವರ ಪ್ರಕರಣಗಳು ಗಣನೀಯ ಪ್ರಮಾಣದಲ್ಲಿ ಏರಿಕೆಯಾಗುತ್ತಿದೆ. ಇದು ಜನರಲ್ಲಿ ತೀವ್ರ ಆತಂಕಕ್ಕೆಡೆ ಮಾಡಿಕೊಟ್ಟಿದೆ. ಹಾಸನದಲ್ಲಿ 6ಮಂದಿ ಮಕ್ಕಳು ಡೆ-ಂಗ್ಯು ಜ್ವರಕ್ಕೆ ಬಲಿಯಾದ ಬೆನ್ನಲ್ಲೇ ಬೆಂಗಳೂರಿನಲ್ಲಿ 11 ವರ್ಷದ ಬಾಲಕ ಡೆಂಗ್ಯುಜ್ವರಕ್ಕೆ ಬಲಿಯಾಗಿದ್ದಾನೆ. ಇದರ ಜೊತೆ ಮಾರಕ ಝಿಕಾ ವೈರಸ್ ಕೂಡ ಕಾಣಿಸಿಕೊಂಡಿದ್ದು ಜನರನ್ನು ಮತ್ತಷ್ಟು ಆತಂಕಕ್ಕೆ ತಳ್ಳಿದೆ.ಬೆಂಗಳೂರಿನ ಅಂಜನಾಪುರದ 11 ವರ್ಷದ ಗಗನ್ ಸಾವನ್ನಪ್ಪಿರುವ ಬಾಲಕ ಎಂದು ಗುರುತಿಸಲಾಗಿದೆ. ಶುಕ್ರವಾರ ತಡರಾತ್ರಿ ಖಾಸಗಿ ಆಸ್ಪತ್ರೆಯಲ್ಲಿ ಗಗನ್ ಮೃತಪಟ್ಟಿದ್ದಾನೆ ಎನ್ನಲಾಗಿದೆ. ಚೈತನ್ಯ ಟೆಕ್ನೋ ಶಾಲೆಯಲ್ಲಿ ಬಾಲಕ ಗಗನ್ ಓದುತ್ತಿದ್ದ ಚಲನೆ ಗಗನ್ ಡೆಂಗಿ ಜ್ವರದಿಂದ ಬಳಲುತ್ತಿದ್ದ ಎಂದೂ ಉಲ್ಲೇಖಿಸಲಾಗಿದೆ.ಮೃತ ಬಾಲಕನ ಪೋಷಕರು ಶಾಲೆಯಲ್ಲಿ ಸರಿಯಾದ ರೀತಿಯಲ್ಲಿ ಸ್ವಚ್ಛತೆಯನ್ನು ಕಾಪಾಡಿಕೊಳ್ಳುತ್ತಿಲ್ಲ. ಹೀಗಾಗಿ ರೋಗ ಹರಡುವ ಸಾಧ್ಯತೆ ಇದೆ ಹಾಗಾಗಿ ಶಾಲಾ ಆಡಳಿತ ಮಂಡಳಿಯ ವಿರುದ್ಧ ಇದೀಗ ಪೋಷಕರು ಆಕ್ರೋಶ ಹೊರಹಾಕಿದ್ದಾರೆ.ಹಾಗೇ, ಹಾಸನ ಜಿಲ್ಲೆಯಲ್ಲಿ ಡೆಂಗ್ಯು ಮಹಾಮಾರಿ ಅಬ್ಬರಿಸುತ್ತಿದೆ. ಜಿಲ್ಲೆಯಲ್ಲಿ ಒಂದೇ ವಾರದೊಳಗೆ ನಾಲ್ಕು ಮಕ್ಕಳು ಡೆ-ಂಘೀ ಜ್ವರಕ್ಕೆ ಬಲಿಯಾಗಿದ್ದಾರೆ. ಜಿಲ್ಲಾಸ್ಪತ್ರೆಯಲ್ಲೇ ಮೂವರು ಮಕ್ಕಳು ಮೃತಪಟ್ಟಿದ್ದಾರೆ.ಕಳೆದ ಜೂನ್ 30 ಹೊಳೆನರಸೀಪುರ ತಾಲೂಕಿನ ದೊಡ್ಡಮಗ್ಗೆಯ 8 ವರ್ಷದ ವರ್ಷಿಕಾ, ಜುಲೈ 1ರಂದು ಅರಕಲಗೂಡು ತಾಲೂಕಿನ 13 ವರ್ಷದ ಅಕ್ಷತಾ ಮೃತಪಟ್ಟಿದ್ದರು. ಜುಲೈ 3ರಂದು ಗುಡ್ಡೇನಹಳ್ಳಿಯ 11 ವರ್ಷದ ಕಲಾಶ್ರೀ ಸಾವನಪ್ಪಿದ್ದು, ಜುಲೈ 5 ನಿನ್ನೆ 8 ವರ್ಷದ ಹೊಳೆನರಸೀಪುರದ ದೊಡ್ಡಹಳ್ಳಿ ಗ್ರಾಮದ ಸಮೃದ್ಧಿ ಚಿಕಿತ್ಸೆ ಫಲಕಾರಿಯಾಗದೆ ಸಾವನ್ನಪ್ಪಿದ್ದರು. ಇತ್ತ ರಾಮನಗರದಲ್ಲಿ ಡೆಂಗ್ಯೂ ವಿರುದ್ಧ ಸಮರ ಸಾರಲಾಗಿದೆ. ಜ್ವರ ಬಂದವರಿಗೆ ಜಿಲ್ಲಾಸ್ಪತ್ರೆಯಲ್ಲಿ ಪರೀಕ್ಷೆ ಮಾಡಲಾಗುತ್ತಿದೆ. 773 ರೋಗಿಗಳ ರಕ್ತದ ಮಾದರಿ ಪರೀ-ಕ್ಷೆ ಮಾಡಿದ್ದು, 58 ಜನರಿಗೆ ಡೆಂಗ್ಯೂ ಪಾಸಿಟಿವ್ ಬಂದಿದೆ. ಇಬ್ಬರ ಸ್ಥಿತಿ ಗಂಭೀರವಾಗಿದ್ದು, ಐಸಿಯುನಲ್ಲಿದ್ದಾರೆ. ಚಿಕ್ಕಬಳ್ಳಾಪುರದಲ್ಲೂ ಡೆಂಗ್ಯೂಗೆ ವ್ಯಕ್ತಿ ಬಲಿ ಚಿಕ್ಕಬಳ್ಳಾಪುರ ಜಿಲ್ಲೆಯ ಗುಡಿಬಂಡೆ ನಿವಾಸಿ ವೇಣು ಡೆಂಗ್ಯೂ ಸೋಂಕಿನಿಂದ ಮೃತಪಟ್ಟಿದ್ದಾನೆ ಎಂದು ಶಂಕಿಸಲಾಗಿದೆ.

**ಕೋವಿಂಡ್ ಮಾದರಿ ಚಿಕಿತ್ಸೆ ಕೊಡಿ**

ಸಾಂಕ್ರಾಮಿಕ ರೋಗಗಳ ವಿರುದ್ಧ ಹೋರಾಡಲು ಮುಖ್ಯವಾಗಿ ಸ್ವಚ್ಛತೆ ಕಾಪಾಡಬೇಕು. ಜತೆಗೆ ಕೋವಿಡ್ ಮಾದರಿಯಲ್ಲಿ ಡೆಂಗ್ಯೂ ರೋಗಿಗಳಿಗೆ ಉಚಿತ ಚಿಕಿತ್ಸೆ ನೀಡಬೇಕೆಂದು ಎಂದು ಸಂಸದ, ಹೃದ್ರೋಗ ತಜ್ಞ ಡಾ.ಸಿ.ಎನ್. ಮಂಜುನಾಥ್ ಸರ್ಕಾರ-ಕ್ಕೆ ಸಲಹೆ ಮಾಡಿದ್ದರು.ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡೆಂಗ್ಯೂ ಜ್ವರದಿಂದ ಆಸ್ಪತ್ರೆಗೆ ದಾಖಲಾದ ರೋಗಿಗಳಿವೆ ಕೋವಿಡ್ ಮಾದರಿಯಲ್ಲಿ ಉಚಿತ ಚಿಕಿತ್ಸೆ ದೊರೆಯಬೇಕು. ಇದು ಸರ್ಕಾರ-ಕ್ಕೆ ನನ್ನ ಸಲಹೆ ಎಂದರು.ಡೆಂಗ್ಯೂ ಜ್ವರ ನಿಯಂತ್ರಣ ಅಂದರೆ ಸೊಳ್ಳೆ ನಿಯಂತ್ರಣ. ಸೊಳ್ಳೆ ನಿಯಂತ್ರಣ ಆದರೆ ಮಾತ್ರ ಡೆಂಗ್ಯೂ ನಿಯಂತ್ರಣ ಆಗಲಿದೆ. ಮಳೆಗಾಲ ಪ್ರಾರಂಭದಲ್ಲಿ ಸೊಳ್ಳೆಯಿಂದ ಹರಡುವ ಕಾಯಿಲೆ ಬರುತ್ತದೆ. ಡೆಂಗ್ಯು ತಡೆಗಟ್ಟದಿದ್ದರೆ ಚಿಕನ್ ಗುನ್ಯ, ಝೀಕಾ ವೈರಸ್ ಬರಬಹುದು. ಇದಕ್ಕೆ ತುರ್ತು ಚಿಕಿತ್ಸೆ ಅಗತ್ಯವಿದೆ. ಮೆಡಿಕಲ್ ಎಮರ್ಜೆನ್ಸಿ ಘೋಷಣೆ ಮಾಡಬೇಕು ಎಂದು ಒತ್ತಾಯಿಸಿದರು.ಡೆಂಗ್ಯುಗೆ ನಿಖರವಾದ ಚಿಕಿತ್ಸೆ ಇಲ್ಲ. ಇದರ ಜೊತೆಗೆ ಇತರ ಕಾಯಿಲೆಗಳು ಬರುತ್ತವೆ.

ರೋಗ ಪತ್ತೆಗೆ ಹೆಚ್ಚು ದರ ತೆಗೆದುಕೊಳ್ಳುವ ಲ್ಯಾಬ್ ಗಳ ಬಾಗಿಲು ಮುಚ್ಚಿಸಬೇಕು. ಸೊಳ್ಳೆ ನಿಯಂತ್ರಣ ಮಾಡಬೇಕು.ಆರೋಗ್ಯ ಇಲಾಖೆ, ನಗರಾಭಿವೃದ್ಧಿ ಇಲಾಖೆ ಕೆಲಸ ಮಾಡಬೇಕು. ಇದನ್ನು ನಿಯಂತ್ರಣ ಮಾಡಲು ಟಾಸ್ಕ್ ಫೋರ್ಸ್ ಮಾಡಬೇಕು. ಬೇಸಿಗೆ ಕಾಲದಲ್ಲೇ ನಾವು ಮಳೆಗಾಲದ ಸಮಸ್ಯೆಗಳಿಗೆ ಪರಿಹಾರ ಮಾಡಬೇಕು. ಸಮರೋಪಾದಿಯಲ್ಲಿ ಕೆಲಸ ಮಾಡಬೇಕು ಎಂದು ತಿಳಿಸಿದರು. ಜಪಾನ್, ಸಿಂಗಾಪುರ್, ಅಮೇರಿಕಾದಲ್ಲಿ ಡೆಂಗ್ಯೂ ಕಾಯಿಲೆಗೆ ಬೇಕಾದ ಮೆಡಿಸಿನ್ ಇದೆ. ಅವುಗಳನ್ನು ರಾಜ್ಯ ಸರ್ಕಾರ ತರಿಸಿಕೊಳ್ಳಬೇಕು. ಇಲ್ಲ ಅಲ್ಲಿ ನೀರು ನಿಲ್ಲುವುದನ್ನು ತಡೆಗಟ್ಟಬೇಕು. ಸೊಳ್ಳೆ ನಿಯಂತ್ರಣ ಮಾಡಲು ಸ್ಪ್ರೇ ಮಾಡುವವರು ಕಾಣುತ್ತಿಲ್ಲ. ಬಿಬಿಎಂಪಿ ಎಚ್ಚೆತ್ತುಕೊಳ್ಳಬೇಕು ಎಂದು ಅವರು ಎಚ್ಚರಿಕೆ ನೀಡಿದರು.ಅದರಲ್ಲೂ, ಡೆಂಗ್ಯು ಮಕ್ಕಳಲ್ಲಿ ಹೆಚ್ಚಾಗಿ ಕಂಡುಬರುತ್ತಿದೆ. ಶಾಲೆಗಳಿಗೆ ಮಾರ್ಗಸೂಚಿ ಹೊರಡಿಸಬೇಕು. ಮಕ್ಕಳಲ್ಲಿ ಆರೋಗ್ಯ ಹದಗೆಟ್ಟಿದ್ದರೆ ಕ್ರಮ ತೆಗೆದುಕೊಳ್ಳಬೇಕು. ಈಗಾಗಲೇ ಏಳೆಂಟು ಜನ ಸಾವನ್ನಪ್ಪಿದ್ದಾರೆ. ಆದರೆ, ಸ್ಲಂಗಳಲ್ಲಿ, ವಠಾರದಲ್ಲಿ ವಾಸವಾಗಿದ್ದವರ ಮನೆಗೆ ಸೊಳ್ಳೆಪರದೆಯನ್ನು ಉಚಿತವಾಗಿ ನೀಡಬೇಕು. ಇದರಿಂದ ಬಹಳಷ್ಟು ರೋಗ ನಿಯಂತ್ರಣ ಆಗಲಿದೆ ಎಂದು ಮಂಜುನಾಥ್ ಸೂಚಿಸಿದರು.

**ಎಷ್ಟು ಪ್ರಕರಣ?**

ರಾಜ್ಯದಲ್ಲಿ ಕಳೆದ 24 ಗಂಟೆಗಳಲ್ಲಿ 155 ಡೆಂಗ್ಯೂ ಕೇಸ್‌ಗಳು ಪತ್ತೆಯಾಗಿವೆ. ಬ್ ಂ ಗ್ ಳ್ ೂ ರ್ ು -3ನೇ ಪುಟಕ್ಕೆ

## ಅಪರಾಧಿಗಳಿಗೆ ಮುಲಾಜಿಲ್ಲದೆ ಅಂಕುಶ ಹಾಕಿ: ಸಿಎಂ



ಬೆಂಗಳೂರು:-

ಕೃತಕ ಬುದ್ದಿಮತ್ತೆ ಬಳಸಿ,ಸ್ವಯಂ ಪ್ರೇರಿತ ದೂರುಗಳನ್ನು ಹೆಚ್ಚೆಚ್ಚು ದಾಖಲಿಸಿ ಯಾವುದೇ ಮುಲಾಜಿಲ್ಲದೆ ಅಪರಾಧಿಗಳು, ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗಿರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲೇಬೇಕು ಎಂದು ಪೊಲೀಸ್ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸ್ಪಷ್ಟ ಸೂಚನೆ ನೀಡಿದರು.ಐಜಿಪಿಗಳು,ಪೊಲೀಸ್ ವರಿಷ್ಠಾಧಿಕಾರಿಗಳು, -3ನೇ ಪುಟಕ್ಕೆ

## ಡೆವಿಲ್ ನಿರ್ದೇಶಕರಿಗೆ ಪೊಲೀಸ್ ಗ್ರಿಲ್



ಬೆಂಗಳೂರು:-

ಚಿತ್ರದುರ್ಗ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಬಂಧಿತರಾಗಿರುವ ನಟ ದರ್ಶನ್ ಅಭಿನಯದ 'ಡೆವಿಲ್' ಸಿನಿಮಾ ನಿರ್ದೇಶಕ ಮಿಲನ ಪ್ರಕಾಶ್ ಅವರಿಗೆ ಇಂದು ಸಹ ವಿಚಾರಣೆಗೆ ಹಾಜರಾಗುವಂತೆ ಸೂಚಿಸಲಾಗಿದೆ.ನೋಟಿಸ್ ಹಿನ್ನೆಲೆ ನಿನ್ನೆ ವಿಜಯನಗರ ಉಪವಿಭಾಗದ ಎಸಿಪಿ ಕಚೇರಿಯಲ್ಲಿ ಪ್ರಕರಣದ ತನಿಖಾಧಿಕಾರಿ ಎಸಿಪಿ ಚಂದನ್ ಕುಮಾರ್ ಎದುರು ಮಿಲನ ಪ್ರಕಾಶ್ ಹಾಜರಾಗಿದ್ದರು.

ಪ್ರಕರಣ ಸಂಬಂಧ ಇಂದೂ ಸಹ ವಿಚಾರಣೆಗೆ ಹಾಜರಾಗುವಂತೆ ಮಿಲನ ಪ್ರಕಾಶ್ ಅವರಿಗೆ ಸೂಚಿಸಲಾಗಿದೆ. ರೇಣುಕಾಸ್ವಾಮಿಯ ಹತ್ಯೆಯ ನಂತರ ಮೈಸೂರಿಗೆ ತೆರಳಿದ್ದ ನಟ ದರ್ಶನ್, ಡೆವಿಲ್ ಚಿತ್ರದ ಚಿತ್ರೀಕರಣದಲ್ಲಿ ಭಾಗಿಯಾಗಿದ್ದರು. ಅಲ್ಲದೇ ಚಿತ್ರಕ್ಕಾಗಿ ದರ್ಶನ್ ಬಹುಕೋಟಿ ರೂ ಸಂಭಾವನೆ ಪಡೆದಿದ್ದಾರೆ ಎನ್ನಲಾಗಿದೆ. ಹಾಗಾಗಿ, ಡೆವಿಲ್ ನಿರ್ದೇಶಕರಿಗೆ ನೋಟಿಸ್ ನೀಡಿರುವ ಪೊಲೀಸರು ಮಾಹಿತಿ ಪಡೆಯುತ್ತಿದ್ದಾರೆ. -3ನೇ ಪುಟಕ್ಕೆ

## ಜು. 13 ಜಗಜೀವನ್ ರಾಂ ಭವನ ಲೋಕಾರ್ಪಣೆ



ಬೆಂಗಳೂರು:-

ಈ ತಿಂಗಳ 13 ರಂದು ನೂತನ ಜಗಜೀವನರಾಂ ಭವನವನ್ನು ಲೋಕಾರ್ಪಣೆ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದ್ದಾರೆ. ಹಸಿರು ಕ್ರಾಂತಿ ಹರಿಕಾರ ಜಗಜೀವನ್ ರಾಂ ಅವರ ಪುಣ್ಯತಿಥಿ ಅಂಗವಾಗಿ ವಿಧಾನಸೌಧದ ಪಶ್ಚಿಮ ದ್ವಾರದ ಬಳಿ ಅವರ ಪ್ರತಿಮೆಗೆ ಪುಷ್ಪನಮನ ಸಲ್ಲಿಸಿದರು.ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಈ ಹಿಂದೆ ಕಾಂಗ್ರೆಸ್ ಸರ್ಕಾರ ಅವಧಿಯಲ್ಲಿ ಜಗಜೀವನ್ ರಾಂ ಅವರ ಭವನದ ನಿರ್ಮಾಣಕ್ಕೆ ಶಂಕುಸ್ಥಾಪನೆ ಮಾಡಲಾಗಿತ್ತು. ಈ ಭವನದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿಯನ್ನು ನೀಡಲಾಗುವುದು ಎಂದರು.ಹಸಿರು ಕ್ರಾಂತಿಯ ಹರಿಕಾರ ಹಿಂದೆ ಬಾಬುಜಗಜೀವನ್‌ರಾಂ ಅವರು ದೇಶದ ಜನರಿಗೆ ಆಹಾರ ಭದ್ರತಾ ಎಂದು ಮಹಾನ್ ವ್ಯಕ್ತಿಯೆಂದು ಹೇಳಿದರು. ಸ್ವಾತಂತ್ರ್ಯ ದೊ-ರೆತ ಸಂದರ್ಭದಲ್ಲಿ ತೀವ ಆಹಾರದ ಕೊರತೆ ಉಂಟಾಗಿ ಬೇರೆ ದೇಶಗಳ ಮುಂದೆ ಬೇಡಬೇಕಾದ ಪರಿಸ್ಥಿತಿ ಇತ್ತು.ಹೊಸ ತಳಿಗಳ ಅಭಿವೃದ್ಧಿ ಸೇರಿದಂತೆ ಹಲವು ಕ್ರಮಗಳ ಮೂಲಕ ಜಗಜೀವನ್ ರಾಂ ಅವರು ಆಹಾರ ಭದ್ರತೆ ಒದಗಿಸಲಾಗಿತ್ತು.

ದಕ್ಷ ಆಡಳಿತಗಾರರಾಗಿ ರಕ್ಷಣೆ ಇಲಾಖೆ ಸೇರಿದಂತೆ ಯಾವುದೇ ಇಲಾಖೆಯಲ್ಲಿ ಕಾರ್ಯನಿರ್ವಹಿಸಿದರೂ ದಕ್ಷತೆಯಿಂದ ಕಾರ್ಯಭಾರ ಮಾಡಿದ್ದಾರೆ. ರೈತರು ಕೂಲಿಕಾರ್ಮಿಕರ ಪರವಾಗಿ ನಿರಂತರವಾಗಿ ಹೋರಾಟ ನಡೆಸಿದ್ದಾರೆ. ಅವರು ತೋರಿದ ಹಾದಿಯಲ್ಲಿ ನಡೆಯುವ ಸಂಕಲ್ಪವನ್ನು ವ್ ಾ ಡ್ ಬ್ ೇ ಕಾ ಗಿ ದ್ -3ನೇ ಪುಟಕ್ಕೆ

## ಮುಡಾ, ವಾಲ್ಮೀಕಿ ಹಗರಣ: ಸಿಎಂ ಶಾಮೀಲು



ಹುಬ್ಬಳ್ಳಿ:-

ಮುಡಾ ಹಾಗೂ ವಾಲ್ಮೀಕಿ ನಿಗಮದ ಹಗರಣಗಳಲ್ಲಿ ಸಿಎಂ ನೇರವಾಗಿ ಭಾಗಿಯಾಗಿದ್ದಾರೆ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಆರೋಪಿಸಿದ್ದಾರೆ.

ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಕರಣವನ್ನು ಮುಚ್ಚಿ ಹಾಕಲು ತರಾತುರಿಯಲ್ಲಿ ಅವರಿವರನ್ನು ಎಸ್.ಐ.ಟಿ.ಯಿಂದ ಬಂಧಿಸಲಾಗುತ್ತಿದೆ ಎಂದು ದೂರಿದರು.ಇಷ್ಟುದಿನ ನಾಗೇಂದ್ರ ತಪ್ಪಿಸಿಕೊಳ್ಳಲು ಅವಕಾಶ ನೀಡಿ ಈಗ ನೋಟೀಸ್ ನೀಡಲಾಗಿದೆ. ಸಿದ್ಧರಾಮಯ್ಯ ಸರ್ಕಾರ ಅತ್ಯಂತ ಭ್ರಷ್ಟ ಸರ್ಕಾರ ಎಂದು ಅವರು ಖಂಡಿಸಿದರು.ಮುಡಾದಲ್ಲಿ ದೊಡ್ಡ ಪ್ರಮಾಣದ ಭ್ರಷ್ಟಾಚಾರ ನಡೆದಿದ್ದು ಇದರ ತನಿಖೆಯನ್ನು ಸಿಬಿಐಗೆ ಕೊಟ್ಟರೆ ಮಾತ್ರ ನಿಷ್ಪಕ್ಷಪಾತ ತನಿಖೆ ಸಾಧ್ಯ ಎಂದು ಅವರು ನುಡಿದರು.ಸಿದ್ಧರಾಮಯ್ಯ ಭ್ರಷ್ಟಾಚಾರ ಮಾಡಿದ್ದು ಇದೇ ಮೊದಲಲ್ಲ ಎಂದ ಅವರು, ಈ ಹಿಂದೆ-ಯೂ ಡಿನೋಟಿಫಿಕೇಶನ್ ಮಾಡಿದ್ದರಾದರೂ ಅದರಿಂದ ತಪ್ಪಿಸಿಕೊಂಡಿದ್ದರು ಎಂದು ನುಡಿದರು.ಮಹದಾಯಿ ಪ್ರವಾಹ ಸಮಿತಿ ಭೇಟಿ ಬಗ್ಗೆ ಬೇರೆ ಅರ್ಥ ಕೊಡಬಾರದು ಎಂದ ಅವರು, ಟ್ರಿಬ್ಯುನಲ್ ಆದ ಯೋಜನೆಗೆ ಸಮಿತಿಯನ್ನು ನೇಮಕ ಮಾಡಲಾಗುತ್ತದೆ, ಅದೇ -3ನೇ ಪುಟಕ್ಕೆ

## ಸಂಪೂರ್ಣ ಅಭಿಯಾನದ ಯಶಸ್ವಿಗೆ ಸಹಕರಿಸಿ: ಡಿಸಿ ಭೂಬಾಲನ್




ತಾಳಿಕೋಟಿ:-

ದೇಶದಲ್ಲಿ ಒಟ್ಟು 500 ತಾಲೂಕುಗಳನ್ನು ಅತಿ ಹಿಂದುಳಿದ ತಾಲೂಕುಗಳೆಂದು ಗುರುತಿಸಲಾಗಿದ್ದು ಅದರಲ್ಲಿ 14 ತಾಲೂಕುಗಳು ಕರ್ನಾಟಕ ರಾಜ್ಯದಲ್ಲಿವೆ ಇದರಲ್ಲಿ ತಾಳಿಕೋಟಿ ತಾಲೂಕು ಕೂಡಾ ಒಂದಾಗಿದೆ. ಈ ತಾಲೂಕನ್ನು ಮುಂದಿನ ಮೂರು ತಿಂಗಳ ಒಳಗಾಗಿ ಆರು ಸೂಚ್ಯಂಕ ಕಾರ್ಯಕ್ರಮದಡಿ ಅಭಿವೃದ್ಧಿಗೊಳಿಸುವ ಗುರಿ ಹೊಂದಲಾಗಿದೆ ಇದಕ್ಕೆ ಇಲಾಖೆಯ ಅಧಿಕಾರಿಗಳೊಂದಿಗೆ ಸಾರ್ವಜನಿಕರ ಸಹಕಾರವು ಅಗತ್ಯವಾಗಿದೆ ಎಂದು ಜಿಲ್ಲಾಧಿಕಾರಿ ಟಿ.ಭೂಬಾಲನ್ ಹೇಳಿದರು. ಪಟ್ಟಣದ ಶ್ರೀ ಸಂಗಮೇಶ್ವರ ಸಭಾಭವನದಲ್ಲಿ ಶುಕ್ರವಾರ ಜಿಲ್ಲಾ ಆಡಳಿತ. ಜಿಪಂ ವಿಜಯಪುರ. ಮತ್ತು ತಾಲೂಕಾಡಳಿತ ತಾಪಂ ತಾಳಿಕೋಟಿ ಇವರ ಸಹಯೋಗದಲ್ಲಿ ಮಹತ್ವಾಕಾಂಕ್ಷಿ ತಾಲೂಕು ಕಾರ್ಯಕ್ರಮದಡಿ ಹಮ್ಮಿಕೊಂಡ ಸಂಪೂರ್ಣತಾ ಅಭಿಯಾನ ಉತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಇಂದು ಈ ಅಭಿಯಾನಕ್ಕೆ ಚಾಲನೆ ಕೊಡಲಾಗಿದೆ ಮೂರು ತಿಂಗಳ ಒಳಗಾಗಿ ಆರು ಸೂಚ್ಯಾಂಕಗಳಾದ ಆರೋಗ್ಯಕ್ಕೆ ಸಂಬಂಧಿಸಿದ ಮೂರು ಹಾಗೂ ಶಿಕ್ಷಣ ಕೃಷಿ ಮತ್ತು ಸಾಮಾಜಿಕ ಅಭಿವೃದ್ಧಿ ಹೀಗೆ ಒಟ್ಟು 6 ಸೂಚಕಗಳ ಮೇಲೆ ಗುರಿ ಇರಿಸಿ ಶೇ 100 ರಷ್ಟು ಅಭಿವೃದ್ಧಿಯನ್ನು ಸಾಧಿಸಲು ಪ್ರಯತ್ನಿಸಲಾಗುವುದು ಎಂದರು. ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ರಿಷಿ ಆನಂದ ಮಾತನಾಡಿ ದೇಶಾದ್ಯಂತ ಮಹತ್ವಕಾಂಕ್ಷೆಯ ಜಿಲ್ಲೆಗಳಲ್ಲಿ ಆರು ಪ್ರಮುಖ ಸೂಚಕಗಳು ಮತ್ತು -3ನೇ ಪುಟಕ್ಕೆ

## ಎಲ್ಲ ತಾಲ್ಲೂಕು ರೈಲ್ವೆ ನಿಲ್ದಾಣ ಅಭಿವೃದ್ಧಿಗೆ ಕ್ರಮ: ಸೋಮಣ್ಣ



ತುಮಕೂರು:-

ರಾಜ್ಯದ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿರುವ ರೈಲ್ವೆ ನಿಲ್ದಾಣಗಳ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗುವುದು ಎಂದು ಕೇಂದ್ರದ ಜಲಶಕ್ತಿ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಇಂದಿಲ್ಲಿ ತಿಳಿಸಿದರು.

ಜಿಲ್ಲಾ ಕೇಂದ್ರಗಳಲ್ಲಿರುವ ರೈಲ್ವೆ ನಿಲ್ದಾಣಗಳಂತೆ ತಾಲ್ಲೂಕು ರೈಲ್ವೆ ನಿಲ್ದಾಣಗಳನ್ನು ಮೇಲ್ದರ್ಜೆಗೇರಿಸಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಒತ್ತು ನೀಡಲಾಗುವುದು. ಈಗಾಗಲೇ ತುಮಕೂರು ರೈಲ್ವೆ ನಿಲ್ದಾಣವನ್ನು 100 ಕೋಟಿ ರೂ. ವೆಚ್ಚದಲ್ಲಿ ಮೇಲ್ದರ್ಜೆಗೇರಿಸಲಾಗಿದೆ ಎಂದರು.

ರಾಜ್ಯದಲ್ಲಿ 7 ನಿಲ್ದಾಣಗಳನ್ನು ಹೊರತುಪಡಿಸಿ ಉಳಿದ ಎಲ್ಲ ತಾಲ್ಲೂಕು ಕೇಂದ್ರಗಳಲ್ಲಿನ ರೈಲ್ವೆ ನಿಲ್ದಾಣಗಳ ಆಧುನೀಕರಣ, ಟಿಕೆಟ್ ನೀಡುವ ವ್ಯವಸ್ಥೆ, ವಿಶ್ರಾಂತಿ ಕೊಠಡಿ ಹಾಗೂ ಪ್ರಯಾಣಿಕರಿಗೆ ರೈಲು ಬಾರದೆ ಸಮಸ್ಯೆ ಉಂಟಾದಾಗ ಆ ಸಮಸ್ಯೆಯನ್ನು ಬಗೆಹರಿಸಲು ಸಹ ವ್ಯವಸ್ಥೆ ಮಾಡುವ ಚಿಂತನೆ ಇದೆ ಎಂದರು.

ನಗರದಲ್ಲಿ ಪತ್ರಕರ್ತರೊಂದಿಗೆ ಔಪಚಾರಿಕವಾಗಿ ಮಾತನಾಡಿದ ಅವರು, 2026ರ ಡಿಸೆಂಬರ್ ಒಳಗೆ ತುಮಕೂರು-ರಾಯದುರ್ಗ, ತುಮಕೂರು-ದಾವಣಗೆರೆ ರೈಲು ಯೋಜನೆಯನ್ನು ಪೂರ್ಣಗೊಳಿಸಿ ಲೋಕಾರ್ಪಣೆ ಮಾಡಲಾಗುವುದು. 600 ಕೋಟಿ ರೂ. ವೆಚ್ಚದಲ್ಲಿ ತುಮಕೂರು-ಚಿತ್ರದುರ್ಗ ರೈಲ್ವೆ ಯೋಜನೆ ಕಾಮಗಾರಿ ಪ್ರಗತಿಯಲ್ಲಿದೆ ಎಂದು ಹೇಳಿದರು.ತುಮಕೂರು ರಾಯದುರ್ಗ, ತುಮಕೂರು ದಾವಣಗೆರೆ ರೈಲ್ವೆ ಯೋಜನೆಗೆ ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡಿರುವ ಹಂತದಲ್ಲಿದೆ. ಮಧುಗಿರಿ ಮತ್ತು ಕೊರಟಗೆರೆ ಭಾಗದಲ್ಲಿ ಇನ್ನು 65 ಎಕರೆ ಮಾತ್ರ ಭೂಸ್ವಾಧೀನ ಆಗಬೇಕಿದೆ. ಹಾಗೆಯೇ ದಾವಣಗೆರೆಯಲ್ಲಿ 15 ಎಕರೆ ಹೊರತುಪಡಿಸಿ -3ನೇ ಪುಟಕ್ಕೆ

# ವಿನಯ, ಉದಾರತೆ, ಪ್ರೀತಿ ಮತ್ತು ವಾತ್ಸಲ್ಯಗಳು ಸೂಫಿ ಸಂತರ ಪ್ರಮುಖ ಬೋಧನೆ



ಕಲಬುರಗಿ:–

ವಿನಯ, ಉದಾರತೆ, ಪ್ರೀತಿ ಮತ್ತು ವಾತ್ಸಲ್ಯಗಳು ಸೂಫಿ ಸಂತರ ಪ್ರಮುಖ ಬೋಧನೆಗಳಾಗಿವೆ. ಸೂಫಿ ಸಂತ ಮೊಯಿನುದ್ದೀನ್ ಚಿಸ್ತಿ ಅವರು ಸೂರ್ಯನಂತೆ ಉದಾತ್ತರಾಗಿರಿ, ಭೂಮಿಯಂತೆ ವಿನಮ್ರರಾಗಿರಿ ಮತ್ತು ನದಿಯಂತೆ ಉದಾರರಾಗಿರಿ ಎಂದು ಹೇಳುದ್ದಾರೆ" ಎಂದು ಅಮೆರಿಕದ ಅಟ್ಲಾಂಟಾದ ಎಮೋರಿ ವಿಶ್ವವಿದ್ಯಾಲಯದ ಪ್ರೊ. ಸ್ಕಾಟ್ ಕುಗಲ್ ಅವರು ಹೇಳಿದರು.

ಅವರು ಸಿಯುಕೆಯ ಮಾನವಿಕ ಮತ್ತು ಭಾಷಾ ನಿಕಾಯವು ಆಯೋಜಿಸಿದ್ದ ಡೆಕ್ಕನ್ನಿನ ಸೂಫಿ ಸಂಗೀತ ಮತ್ತು ಕಾವ್ಯ' ಕುರಿತು ವಿಶೇಷ ಉಪನ್ಯಾಸ ನಿಡಿ ಮಾತನಾಡಿದರು. ಅವರು ಮುಂದುವರೆದು ಮಾತನಾಡಿ "ಸೂಫಿ ಪರಂಪರೆ ಎಂಬುದು ಇಸ್ಲಾಂ ಧರ್ಮದಲ್ಲಿ ಕಂಡುಬರುವ ಧಾರ್ಮಿಕ ಆಚರಣೆಯ ಒಂದು ಪದ್ಧತಿಯಾಗಿದೆ. ಇದು ಇಸ್ಲಾಮಿಕ್ ಶುದ್ಧೀಕರಣ, ಆಧ್ಯಾತ್ಮಿಕತೆ, ಧಾರ್ಮಿಕತೆ ಮತ್ತು ತಪಸ್ವಿಗಳ ಕುರಿತದ್ದಾಗಿದೆ. ಸೂಫಿ ಸಂತರು ದೇವರು ಮತ್ತು ಭಕ್ತನ ನಡುವಿನ ನಿಕಟ ಸಂಬಂಧದ ಬಗ್ಗೆ ಮಾತನಾಡುತ್ತಾರೆ. ಯಾವುದೇ ನಿರೀಕ್ಷೆಗಳಿಲ್ಲದೆ ದೇವರನ್ನು ಆತ್ಮೀಯವಾಗಿ ಪ್ರೀತಿಸಬೇಕು ಎಂದು ಅವರು ಹೇಳುತ್ತಾರೆ. ಖ್ವಾಜಾ ಬಂದಾ ನವಾಜ್ ಗೆಸುದರಾಜ್ ಅವರು ಆರಂಭಿಕ ದಖನಿ ಉರ್ದು ಸೂಫಿ ಸಂತರಲ್ಲಿ ಒಬ್ಬರಾಗಿದ್ದಾರೆ. ಅವರು ಕಾವ್ಯ ಮತ್ತು ಗದ್ಯ ಎರಡರಲ್ಲೂ ಸುಫಿ ಸಾಹಿತ್ಯವನ್ನು ಬರೆದ ಡೆಕ್ಕನ್ನಿನ (ದಕ್ಷಿಣ ಭಾರತದ) ಮೊದಲ ಸೂಫಿ ಸಂತರಾಗಿದ್ದಾರೆ. ನಂತರ ಅನೇಕ ಡೆಕ್ಕನ್ ಸೂಫಿಗಳು ಅವರನ್ನು ಅನುಸರಿಸಿದರು. ದಖನಿ ಉರ್ದು ಆಧುನಿಕ ಉರ್ದುಗಿಂತ ಭಿನ್ನವಾಗಿದೆ. ಸೂಫಿ ಸಂತರು ತಮ್ಮ ಬರಹಗಳನ್ನು ಸ್ಥಳೀಯ ಭಾಷೆ, ಕಾವ್ಯ ಮತ್ತು ಸಂಗೀತಕ್ಕೆ ಅನುಗುಣವಾಗಿ ಅಳವಡಿಸಿಕೊಂಡರು. ಆದ್ದರಿಂದ ನಾವು ಖ್ವಾಜಾ ಬಂದಾ ನವಾಜರ ಬರಹಗಳನ್ನು ಗದ್ಯ ಮತ್ತು ಕಾವ್ಯದ ರೂಪದಲ್ಲಿ ನೋಡುತ್ತೇವೆ, ಆದರೆ ಉತ್ತರ ಭಾರತದ ಅನೇಕ ಸೂಫಿಗಳು ಕಾವ್ಯ ರೂಪದಲ್ಲಿ ಮಾತ್ರ ಬರೆದಿದ್ದಾರೆ. ಆ ಕಾಲದಲ್ಲಿ ಕನ್ನಡ ಸಾಹಿತ್ಯದಲ್ಲಿ ಗದ್ಯದ ಪ್ರಾಬಲ್ಯವೇ ಇದಕ್ಕೆ ಕಾರಣವಿರಬಹುದು. ಅಂದಿನ ಉತ್ತರ ಕರ್ನಾಟಕದಲ್ಲಿದ್ದ ಶಿವ ಶರಣರ ಸಾಹಿತ್ಯ ಮತ್ತು ಅವರು ತತ್ವಗಳು ಸೂಫಿ ಸಂತರ ಬರವಣಿಗೆಗಳ ಮೇಲೆ ಪ್ರಭಾವ ಬೀರಿರುವ ಸಾಧ್ಯತೆಯಿದೆ. ಅಂದಿನ ಭಾರತೀಯ ಸಮಾಜದಲ್ಲಿ ಸೂಫಿಸಂ ಬಹುಮುಖ್ಯ ಪಾತ್ರವನ್ನು ವಹಿಸಿದೆ. ಪರ್ಷಿಯನ್ ಅಂತರರಾಷ್ಟ್ರೀಯ ಮತ್ತು ಆಡಳಿತ ಭಾಷೆಯಾಗಿತ್ತು. ಸ್ಥಳೀಯ ಜನರೊಂದಿಗೆ ಸಂಪರ್ಕ ಸಾಧಿಸುವುದು ತುಂಬಾ ಕಷ್ಟಕರವಾಗಿತ್ತು. ಹಾಗಾಗಿ ಸ್ಥಳೀಯ ಭಾಷೆಗಳಿಗೆ ಹೊಂದಿಕೊಳ್ಳಲು ಆರಂಭಿಸಿದರು. ಆದ್ದರಿಂದ ಸೂಫಿ ಸಾಹಿತ್ಯವನ್ನು ಡೆಕ್ಕನ್ನಿನ ಉರ್ದು, ಗುಜಿರಿ, ಹಿಂದಾಲಿ ಮತ್ತು ಉರ್ದು ಮತ್ತು ಪರ್ಷಿಯನ್ ಭಾಷೆ ಮತ್ತು ಇತರ ಹಲವು ಸ್ಥಳೀಯ ಭಾಷೆಗಳಲ್ಲಿ ರಚಿಸಲಾಗಿದೆ. ಸೂಫಿ ಸಂತ ಶಹಭಜನ್ ಮಹಾನ್ ಸಂಗೀತಗಾರರಾಗಿದ್ದರು. ಅವರ ಕವಿತೆಗಳು ತುಂಬಾ ಸಂಗೀತಮಯವಾಗಿವೆ ಮತ್ತು ಅವುಗಳನ್ನು ಭಾರತೀಯ ರಾಗಗಳಲ್ಲಿ ಹಾಡಬೇಕು" ಎಂದು ಹೇಳಿದರು.

ಸೂಫಿ ಕವಿತೆಗಳ ರಚನೆಯ ಬಗ್ಗೆ ಮಾತನಾಡುತ್ತಾ ಅವರು ಹೇಳುತ್ತಾರೆ "ಸೂಫಿ ಕವಿತೆಗಳು ಹೆಚ್ಚು ಸರಳವಾಗಿವೆ, ಸಾಮಾನ್ಯ ಜನರು ಅರ್ಥಮಾಡಿಕೊಳ್ಳಲು ಸುಲಭವಾಗಿವೆ. ಇವು ಗಜಲ್ ಮತ್ತು ದೋಹೆಗಳಿಗಿಂತ ಸರಳ ಮತ್ತು ಸಡಿಲವಾದ ಆವೃತ್ತಿಗಳಾಗಿವೆ. ಇಂದು ಅವುಗಳನ್ನು ಉರುಸ್, ಕುಟುಂಬ ಸಮಾರಂಭಗಳು ಮತ್ತು ಇತರ ಸಾರ್ವಜನಿಕ ಕಾರ್ಯಕ್ರಮಗಳಂತಹ ವಿವಿಧ ಸಂದರ್ಭಗಳಲ್ಲಿ ಹಾಡಲಾಗುತ್ತದೆ. ಸೂಫಿ ಕವಿತೆಗಳಲ್ಲಿ ಕವಿಯ ಸ್ಥಾನವು ಸ್ಥಿರವಾಗಿಲ್ಲ. ಇದು ಸಂದರ್ಭಕ್ಕೆ ತಕ್ಕಂತೆ ಬದಲಾಗುತ್ತದೆ. ಅದು ದೇವರು ಮತ್ತು ಭಕ್ತನ ಸಂಬಂಧ, ಪ್ರೇಮಿ ಮತ್ತು ಪ್ರೆಯಸಿಯ ಪಾತ್ರರಾಗಿರಬಹುದು. ಇದು ನಮ್ಮ ಅಹಂಕಾರವನ್ನು ಕರಗಿಸುವ ಉದ್ದೇಶವನ್ನು ಹೊಂದಿರುತ್ತದೆ. ಅವರು ತಮ್ಮನ್ನು ತಾವು ತಿಳಿದುಕೊಳ್ಳುವ ಬಗ್ಗೆ ಹೆಚ್ಚು ಮಾತನಾಡುತ್ತಾರೆ. ಯಾರು ತಮ್ಮನ್ನು ತಾವು ತಿಳಿದಿರುವವರೋ ಅವರು ದೇವರನ್ನು ತಿಳಿದುಕೊಳ್ಳಲು ಸಾಧ್ಯವಾಗುತ್ತದೆ" ಎಂದು ಹೇಳಿದರು.

ಸೂಫಿ ಸಂಗೀತ ಮತ್ತು ಕಾವ್ಯದ ಕುರಿತು ಮಾತನಾಡಿದ ಅವರು "ಸೂಫಿ ಕಾವ್ಯವು ಸೂಫಿ ಸಂಗೀತದೊಂದಿಗೆ ಸಂಪರ್ಕ ಹೊಂದಿದೆ. ಕವಾಲಿ ಎಂಬುದು ಸೂಫಿ ಕವಿತೆಯ ಹಾಡಿನ ಒಂದು ರೂಪವಾಗಿದೆ. ಕಾಶ್ಮೀರಿ, ಬೆಂಗಾಲಿ, ಭವಾಲಿ ಸಂಪ್ರದಾಯಗಳಂತಹ ಕವ್ವಾಲಿಗಳ ವಿವಿಧ ರೂಪಗಳಿವೆ; ಭಾರತದಲ್ಲಿ ವಿವಿಧ ಪ್ರದೇಶಗಳು ತಮ್ಮದೇ ಆದ ಕವ್ವಾಲಿಗಳನ್ನು ಹೊಂದಿವೆ" ಎಂದು ಹೇಳಿದರು.

ಭಾರತದಲ್ಲಿ ಸೂಫಿ ಸಂಪ್ರದಾಯಗಳ ವಿನಿಮಯ ಮತ್ತು ಅವುಗಳ ಬೆಳವಣಿಗೆಯ ಕುರಿತು ಮಾತನಾಡುತ್ತಾ "ಖ್ವಾಜಾ ಬಂದಾ ನವಾಜರ ನಂತರ ದಖನಲ್ಲಿ ಸೂಫಿ ಸಂಪ್ರದಾಯವು ಮತ್ತಷ್ಟು ಅಭಿವೃದ್ಧಿ ಹೊಂದಿತು ಮತ್ತು ಶ್ರೀಮಂತವಾಯಿತು. ಉತ್ತರದ ಅನೇಕ ಸೂಫಿ ಸಂತರು ದಕ್ಷಿಣಕ್ಕೆ ಬಂದರು ಮತ್ತು ಅದೇ ರೀತಿ ದಕ್ಷಿಣದ ಸಂತರು ಉತ್ತರಕ್ಕೆ ಹೋದರು ಇದು ಮಿಶ್ರ ಸಂಪ್ರದಾಯದ ಹುಟ್ಟಿಗೆ ಕಾರಣವಾಯಿತು. ಮೊಘಲರ ಕಾಲದಲ್ಲಿ ಅದು ಉತ್ತುಂಗಕ್ಕೇರಿತು" ಎಂದು ಅವರು ಹೇಳಿದರು.

ಡೆಕ್ಕನ್ ಸೂಫಿ ಕಾವ್ಯ ಮತ್ತು ಸಂಗೀತ ಭಾರತದ ಇತರ ಭಾಗಗಳಿಗಿಂತ ಹೇಗೆ ಭಿನ್ನವಾಗಿದೆ ಎಂಬ ಪ್ರಶ್ನೆಗೆ ಉತ್ತರಿಸುತ್ತಾ "ಅವುಗಳಲ್ಲಿ ಹೆಚ್ಚು ವ್ಯತ್ಯಾಸವಿಲ್ಲ. ದೆಹಲಿಯ ಕವ್ವಾಲಿಯು ಮಹಮ್ಮದ್ ಬಿನ್ ತುಘಲಕನ ಅವಧಿಯಲ್ಲಿ ಡೆಕ್ಕನ್‌ಗೆ ಸ್ಥಳಾಂತರಗೊಂಡು ಇಲ್ಲಿ ಅಭಿವೃದ್ಧಿ ಹೊಂದಿತು. ಪರ್ಷಿಯನ್, ಅರೇಬಿಕ್ ಮತ್ತು ಉರ್ದುವಿನ ಕಲ್ಪನೆಗಳನ್ನೇ ಇವು ಹೋಲುತ್ತವೆ ಆದರೆ ಸ್ಥಳೀಯ ಭಾಷಾ ಮತ್ತು ಭಾಷಾ ವಾತಾವರಣದೊಂದಿಗೆ ರೂಪಾಂತರಗೊಂಡಿವೆ" ಎಂದರು.

ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಅವರು ಅಧ್ಯಕ್ಷೀಯ ನುಡಿಗಳನ್ನಾಡಿ "ಅಮೆರಿಕದ ಪ್ರಾಧ್ಯಾಪಕರು ಡೆಕ್ಕನ್‌ನಲ್ಲಿ ತುಂಬಾ ಕೆಲಸ ಮಾಡುತ್ತಿದ್ದಾರೆ ಆದರೆ ನಾವು ನಮ್ಮ ಪ್ರದೇಶವನ್ನು ಮರೆತಿದ್ದೇವೆ. ಭವಿಷ್ಯದಲ್ಲಿ ಇದೇ ಪ್ರವೃತ್ತಿ ಮುಂದುವರಿದರೆ ನಾವು ನಮ್ಮ ಇತಿಹಾಸ ಮತ್ತು ಪರಂಪರೆಗಾಗಿ ವಿದೇಶಿ ಲೇಖಕರನ್ನು ಅವಲಂಬಿಸಬೇಕಾಗುತ್ತದೆ. ಸಂಶೋಧನೆಯಲ್ಲಿ ಅವರ ಬದ್ಧತೆ ಮತ್ತು ಸಮರ್ಪಣೆ ಶ್ಲಾಘನೀಯವಾಗಿದೆ ಮತ್ತು ನಮ್ಮ ಪ್ರಾಧ್ಯಾಪಕರಿಗೆ ಸ್ಫೂರ್ತಿದಾಯಕವಾಗಿದೆ" ಎಂದರು.

ಡಾ.ಕುಮಾರ್ ಮಂಗಲಂ ನಿರೂಪಿಸಿ ಸ್ವಾಗತಿಸಿದರು, ಡಾ.ಸ್ವಪ್ನಿಲ್ ಚಾಪೇಕರ್ ವಂದಿಸಿದರು. ಪ್ರೊ.ವಿಕ್ರಂ ವಿಸಾಜಿ, ಪ್ರೊ.ಶಿವಗಂಗಾ ರುಮ್ಮಾ, ಪ್ರೊ.ಬಸವರಾಜ ಡೋಣೂರ, ಪ್ರೊ.ಭೀಮರಾವ್ ಭೋಸ್ಲೆ, ಪ್ರೊ.ಸುನೀತಾ ಮಂಜನಬೈಲ್, ಆಹ್ವಾನಿತರು, ಅಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.





## ಬೊಜ್ಜು ಕರಗಿಸಲು ಸೀಬೆ ಮದ್ದು



ಸೀಬೆ ಎಂದರೆ ಎಲ್ಲರಿಗೂ ಇಷ್ಟ. ಈ ಹಣ್ಣು ರುಚಿಯಾಗಿರುತ್ತದೆ. ಸೀಬೆಗೆ ಇನ್ನೊಂದು ಹೆಸರು ಪೇರಲ. ಮಾಗಿದಾಗ ವಿಶಿಷ್ಟ ಪರಿಮಳ ಹರಡುತ್ತದೆ. ಇದು ನೋಡಲೂ ಸಹ ಆಕರ್ಷಕವಾಗಿರುತ್ತದೆ. ಶ್ರಾವಣ ಬಂತು ಎಂದರೆ ಎಲ್ಲಿ ನೋಡಿದರೂ ಸೀಬೆಯೇ. ದೋರೆಗಾಯಿ ಇದ್ದಾಗ ಸೀಬೆಯಲ್ಲಿ ಸಿಹಿ, ಹುಳಿ ಮತ್ತು ಒಗರು ಮಿಳಿತಗೊಂಡಿದ್ದು ತಿನ್ನಲು ಬಲು ರುಚಿಯಾಗಿರುತ್ತದೆ. ಸೀಬೆಗೆ ಸಂಸ್ಕೃತದಲ್ಲಿ ಅಮೃತಫಲಂ ಎಂದರೆ, ಹಿಂದಿಯಲ್ಲಿ ಅಮ್ರುದ್, ತೆಲುಗಿನಲ್ಲಿ ಜಾಮ, ತಮಿಳಿನಲ್ಲಿ ಕೊಯ್ಯಾಪಳಂ ಹಾಗೂ ಇಂಗ್ಲಿಷ್‌ನಲ್ಲಿ ಗೋವಾ ಎಂದು ಕರೆಯುತ್ತಾರೆ. ಸೀಬೆ ಹಣ್ಣಿನಲ್ಲಿ ಶರೀರಕ್ಕೆ ಅಗತ್ಯವಿರುವ ವಿವಿಧ ಪೋಷಕಾಂಶಗಳು ಸಾಕಷ್ಟಿವೆ. ಹಣ್ಣು ದೊರೆಯುವ ಅವಧಿಯಲ್ಲಿ ಯಥೇಚ್ಛವಾಗಿ ಬಳಸಿ ಲಾಭ ಹೊಂದಬೇಕು. ಅತ್ಯಧಿಕ ಔಷಧೀಯ ಗುಣವಿರುವ ಇದು ಹಿತ್ತಲಗಿಡ. ಇದರ ಬೆಲೆಯೂ ಕಡಿಮೆಯಿದ್ದು, ಆರೋಗ್ಯಕ್ಕೆ ಹೆಚ್ಚು ಉಪಯುಕ್ತ. ಹಸಿರು ಕಾಯಿ ಒಗರಾಗಿರುತ್ತದೆ. ದೋರೆಗಾಯಿ ಹೆಚ್ಚು ರುಚಿಯಾಗಿರುತ್ತದೆ. ಅಧಿಕ ಪ್ರಮಾಣದ ಶರ್ಕರ ಪಿಷ್ಟಗಳ ಜೊತೆಗೆ ಪ್ರೋಟೀನು, ಸುಣ್ಣ, ರಂಜಕ, ಕಬ್ಬಿಣ ಹಾಗೂ ಕ್ಯಾಲೊರಿ ಸತ್ವಗಳಿರುತ್ತವೆ. 'ಸಿ' ಅನ್ನಾಂಗದ ಜೊತೆಗೆ ಇತರ ಅನ್ನಾಂಗಗಳು ಸ್ವಲ್ಪ ಮಟ್ಟಿಗೆ ಇರುತ್ತದೆ. ದೋರೆಗಾಯಿಗಳಲ್ಲಿ ಅಧಿಕ ಪೆಕ್ಟಿನ್ ಅಂಶವಿರುತ್ತದೆ. ಸೀಬೆ ಹಣ್ಣನ್ನು ರುಚಿಗೋಸ್ಕರ ಇಲ್ಲವೇ ಆಹಾರವಾಗಿ ಬಳಸು ವುದು ಮಾತ್ರವಲ್ಲ, ಅದು ಉತ್ತಮ ಔಷಧಿಯ ಗುಣ ಸಹ ಹೊಂದಿದೆ. ಅಧಿಕ ಪ್ರಮಾಣದ ಪ್ರೋಟೀನು ಇರುವ ಕಾರಣ ಮಾಂಸಖಂಡಗಳನ್ನು ಬಲಪಡಿಸಬಲ್ಲದು. ನಾರಿನ ಅಂಶ ಅಧಿಕವಿರುವ ಕಾರಣ ತಿಂದ ಆಹಾರ ಕರುಳುಗಳಲ್ಲಿ ಸುಲಭವಾಗಿ ಚಲಿಸುವಂತೆ ಮಾಡಬಲ್ಲದು. ಆದ್ದರಿಂದ ಮಲಬದ್ಧತೆಗೆ ಇದು ದಿವ್ಯೌಷಧ. ಈ ಉದ್ದೇಶಕ್ಕಾಗಿ ರಾತ್ರಿ ಊಟದ ನಂತರ ಪ್ರತಿ ನಿತ್ಯ ಒಂದೆರೆಡು ಹಣ್ಣುಗಳನ್ನು ತಿಂದಲ್ಲಿ ಮುಂಜಾನೆ ಸುಖ ವಿರೇಚನ ಸಾಧ್ಯ. ಹಣ್ಣುಗಳಲ್ಲಿರುವ ಕಬ್ಬಿಣದ ಅಂಶ ರಕ್ತ ಶುದ್ಧಿಗೆ ಸಹಾಯಕ. ಇದು 'ಸಿ' ಅನ್ನಾಂಗದ ಒಳ್ಳೆಯ ಮೂಲವಾದ್ದರಿಂದ ಹಲ್ಲಿನ ಒಸಡುಗಳು ಗಟ್ಟಿಗೊಳ್ಳುತ್ತವೆ. ಹಾಗೂ ಸ್ಕರ್ವಿ ರೋಗವನ್ನು ದೂರ ಮಾಡಬಲ್ಲದು. ಸೀಬೆಯಲ್ಲಿ ಬೆಟಾ ಕೆರಾಟಿನ್, ಪೊಟ್ಯಾಶಿಯಂ ಮತ್ತು ಫೈಬರ್ ಅಂಶ ಹೆಚ್ಚಾಗಿರುವುದರಿಂದ ಇದು ಹೆಚ್ಚು ಉಪಯೋಗಕಾರಿಯಾಗಿದ್ದು ರಕ್ತದಲ್ಲಿನ ಸಕ್ಕರೆ ಅಂಶ ಮತ್ತು ಕೊಲೆಸ್ಟಾಲ್ ನಿಯಂತ್ರಿಸುವ ಗುಣವನ್ನು ಹೊಂದಿದೆ ಹಾಗೂ ಹೃದಯದ ಸ್ವಾಸ್ಥ್ಯವನ್ನು ಕಾಪಾಡುತ್ತದೆ. ತೂಕ ಕಡಿಮೆ ಮಾಡಿಕೊಳ್ಳಬೇಕೆಂದಿದ್ದರೆ ಸೀಬೆ ಹಣ್ಣು ಒಳ್ಳೆ ಆಯ್ಕೆ. ಸೀಬೆಯಲ್ಲಿ ಅವಶ್ಯಕ ಕಾರ್ಬೋಹೈಡ್ರೇಟ್ ಮತ್ತು ಫೈಬರ್ ಇರುವುದರಿಂದ ಬೊಜ್ಜನ್ನು ನಿಯಂತ್ರಿಸುತ್ತದೆ. ಸೀಬೆಯಲ್ಲಿ ಕೊಬ್ಬಿನಾಂಶ ಕೇವಲ 0.9 ಇದ್ದು, 84 ಕ್ಯಾಲೊರಿ ಮಾತ್ರ ಇರುತ್ತದೆ. ಸೇಬು ಹಣ್ಣಿಗೆ ಹೋಲಿಸಿದರೆ ಸೀಬೆಯಲ್ಲಿ ಶೇ 42 ರಷ್ಟು ಕಡಿಮೆ ಕ್ಯಾಲೊರಿ ಮತ್ತು ಶೇ.38 ರಷ್ಟು ಕಡಿಮೆ ಕೊಬ್ಬಿನಾಂಶವಿದೆ. ಮಕ್ಕಳಿಗೆ ಕೆಲವರು ಈ ಹಣ್ಣನ್ನು ತಿನ್ನಲು ಕೊಡುವುದಿಲ್ಲ ಅದಕ್ಕೆ ಕಾರಣ ಅವು ಕೆಮ್ಮನ್ನುಂಟುಮಡುತ್ತವೆ ಎಂಬ ಶಂಕೆ. ಆದರೆ ಇದು ತಪ್ಪು. ಎಳೆಯ ಮಕ್ಕಳಿಗೆ ಸಾಕಷ್ಟು ಹಣ್ಣನ್ನು ಕೊಡುತ್ತಿದ್ದಲ್ಲಿ 'ಸಿ' ಅನ್ನಾಂಗದ ಅಭಾವ ತಾನೇ ತಾನಾಗಿ ನಿವಾರಣೆಯಾಗುತ್ತದೆ. ನುಣ್ಣಗೆ ಕುಟ್ಟಿ ಪುಡಿಮಾಡಿದ ಎಲೆಗಳನ್ನು ಸಂಧಿವಾತದಲ್ಲಿ ಬಳಸುತ್ತಾರೆ. ಅವುಗಳ ತಿಳಿರಸ ಅಪಸ್ಮಾರಕ್ಕೆ ಒಳ್ಳೆಯ ಔಷಧಿ. ಎಲೆಗಳನ್ನು ಕುದಿಸಿ ತೆಗೆದ ನೀರನ್ನು ಮುಕ್ಕಳಿಸುತ್ತಿದ್ದಲ್ಲಿ ಒಸಡುಗಳ ಊತ ಮತ್ತು ಹಲ್ಲು ನೋವು ತಗ್ಗುತ್ತದೆ. ಸೀಬೆ ಮರದ ಎಲೆಗಳನ್ನು ಅರೆದು ಗಾಯ ಹಾಗೂ ವ್ರಣಗಳಿಗೆ ಪಟ್ಟು ಹಾಕುವುದುಂಟು.

# ವಾಸವದತ್ತಾ ರೈಲು ಸಂಚಾರ ಸಮಯ ಬದಲು : ಡಿಸಿ ಭರವಸೆ



ಸೇಡಂ:–

ವಾಸವದತ್ತಾ ಸಿಮೆಂಟ್ ಕಾರ್ಖಾನೆಗೆ ಹಾದುಹೋಗಿರುವ ರೈಲು ಸಂಚಾರ ಸಮಯ ಬದಲಿಸಲಾಗುವುದು ಎಂದು ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್ ಭರವಸೆ ನೀಡಿದ್ದಾರೆ.

ಪಟ್ಟಣದ ಮಿನಿ ವಿಧಾನಸೌಧದಲ್ಲಿ ನಡೆದ ಜಿಲ್ಲಾಧಿಕಾರಿಗಳ ನೇತೃತ್ವದ ಜನಸ್ಪಂದನಾ ಸಭೆಯಲ್ಲಿ, ಸೇಡಂ ಜನಹಿತ ರಕ್ಷಣಾ ಸಮಿತಿ ಸಲ್ಲಿಸಿದ ಮನವಿ ಆಲಿಸಿದ ಅವರು, ಕೂಡಲೆ ರೈಲ್ವೆ ಇಲಾಖೆಯ ಸಿಕಿಂದರಾಬಾದ ಡಿವಿಜನ್ ಅಧಿಕಾರಿಗಳಿಗೆ ಸೂಚಿಸಿ ರೈಲು ಸಮಯ ಬದಲಿಸುವುದಾಗಿ ಹೇಳಿದರು.


ಅಲ್ಲದೆ ರೈಲ್ವೆ ಹಳಿ ಸ್ಥಳಾಂತರ ಕುರಿತು ಮುಂದಿನ ದಿನಗಳಲ್ಲಿ ಚರ್ಚಿಸಲಾಗವುದು. ಸಾರ್ವಜನಿಕರು ಅನುಭವಿಸುತ್ತಿರುವ ಸಮಸ್ಯೆಗೆ ಪರಿಹಾರ ಕಲ್ಪಿಸುವುದಾಗಿ ಅವರು ಇದೇ ವೇಳೆ ಹೇಳಿದ್ದಾರೆ. ಅನೇಕ ವರ್ಷಗಳಿಂದ ಪಟ್ಟಣದ ಹೃದಯ ಭಾಗದಿಂದ ವಾಸವದತ್ತಾ ಸಿಮೆಂಟ್ ಕಾರ್ಖಾನೆಗೆ ಹಾದುಹೋಗಿರುವ ರೈಲು ಹಳಿಯಿಂದ ದಿನನಿತ್ಯ ಸಾವಿರಾರು ಜನ ತೊಂದರೆ ಎದುರಿಸುತ್ತಿದ್ದರು. ಪಟ್ಟಣದ ರೈಲು ಹಳಿಯ ಒಂದು ಭಾಗದಲ್ಲಿ ಸರಕಾರಿ ಹಾಗೂ ಖಾಸಗಿ ಆಸ್ಪತ್ರೆಗಳು, ಸರಕಾರಿ ಶಾಲಾ, ಕಾಲೇಜುಗಳು ಹಾಗೂ ಸರಕಾರಿ ಕಚೇರಿಗಳು ಇದ್ದು, ಪ್ರತಿನಿತ್ಯ ಹತ್ತಾರು ಗೂಡ್ಸ್ ರೈಲುಗಳ ಸಂಚಾರದಿಂದ ಸಾವು ನೋವುಗಳು ಸಂಭವಿಸಿದ್ದವು. ಆದರೂ ಸಹ ಸಿಮೆಂಟ್ ಕಾರ್ಖಾನೆ ಇದರ ಬಗ್ಗೆ ತಲೆಕೆಡಿಸಿಕೊಂಡಿರಲಿಲ್ಲ.

ಇತ್ತೀಚೆಗೆ ಸೇಡಂ ಜನಹಿತ ರಕ್ಷಣಾ ಸಮಿತಿ ವತಿಯಿಂದ ಕೇಂದ್ರದ ಮತ್ತು ರಾಜ್ಯದ ರೈಲ್ವೆ ಸಚಿವರಿಗೆ ಮನವಿ ಪತ್ರ ರವಾನಿಸಿ, ಸಮಸ್ಯೆಗೆ ತಿಲಾಂಜಲಿ ಹಾಡಬೇಕು. ರೈಲ್ವೆ ಇಲಾಖೆ ಬೇಕಾಬಿಟ್ಟಿಯಾಗಿ ರೈಲು ಸಂಚಾರಕ್ಕೆ ಅನುಮತಿ ನೀಡಬಾರದು ಎಂದು ಒತ್ತಾಯಿಸಿತ್ತು.

ಈ ಹಿನ್ನಲೆಯಲ್ಲಿ ಜಿಲ್ಲಾಧಿಕಾರಿಗಳು ಸಹ ಸಮಿತಿಯ ಮನವಿಗೆ ಸ್ಪಂಧಿಸಿದ್ದು, ಶೀಘ್ರವೆ ಸಮಸ್ಯೆಗೆ ಪರಿಹಾರ ಕಂಡುಕೊಡುವ ಭರವಸೆ ನೀಡಿದ್ದು, ಸಾರ್ವಜನಿಕರಲ್ಲಿ ಭರವಸೆ ಮೂಡುವಂತಾಗಿದೆ. ವಿಹಿಂಪ ಪ್ರಾಂತ ಕಾರ್ಯದರ್ಶಿ ಶಿವಕುಮಾರ ಬೋಳಶೆಟ್ಟಿ, ಕೋಲಿ ಸಮಾಜದ ತಾಲೂಕು ಅಧ್ಯಕ್ಷ ಮಲ್ಲಿಕಾರ್ಜುನ ಮೆಕ್ಯಾನಿಕ್, ಸಿದ್ದಪ್ಪ ನಿಲಂಗಿ, ಮಳಖೇಡ ಗ್ರಾಮ ಪಂಚಾಯತ ಸದಸ್ಯ ಉಮೇಶ ಜಾಧವ, ರೈತ ಮುಖಂಡ ಆಮಶೆಟ್ಟಿ ಪಾಟೀಲ ಹೆಡ್ಡಳ್ಳಿ, ವಸಂತ ಪೂಜಾರಿ, ಸಾಮಾಜಿಕ ಕಾರ್ಯಕರ್ತ ಶಿವಕುಮಾರ ಅಪ್ಪಾಜಿ ಇತರರು ಈ ವೇಳೆ ಹಾಜರಿದ್ದರು.

ಹೋರಾಟಕ್ಕೆ ವರ್ತಕರ ಸಂಘದ ಬೆಂಬಲ ಸೇಡಂ ಜನಹಿತ ರಕ್ಷಣಾ ಸಮಿತಿಯ ಹೋರಾಟಕ್ಕೆ ವರ್ತಕರ ಸಂಘ ಬೆಂಬಲ ನೀಡಿದೆ. ಅಲ್ಲದೆ ಮುಂದಿನ ಹೋರಾಟದ ರೂಪುರೇಷೆಗಳನ್ನು ಮಾಡುವ ಮೂಲಕ ಪ್ರತಿಭಟನೆಯನ್ನು ಮತ್ತಷ್ಟು ಬಲಿಷ್ಠ ಮಾಡುವುದಾಗಿ ಸಂಘದ ಅಧ್ಯಕ್ಷ ಶಿವಕುಮಾರ ಬೋಳಶೆಟ್ಟಿ ತಿಳಿಸಿದ್ದಾರೆ.

# ಜೇವರ್ಗಿ ಜನಸ್ಪಂದನಾ ಸಭೆ:120 ಅರ್ಜಿ ಸಲ್ಲಿಕೆ, 25ಕ್ಕೆ ಸ್ಥಳದಲ್ಲಿಯೇ ಪರಿಹಾರ



ಕಲಬುರಗಿ:–

ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಶುಕ್ರವಾರ ಜೇವರ್ಗಿ ಪಟ್ಟಣದ ಮಿನಿ ವಿಧಾನಸೌಧ ಆವರಣದಲ್ಲಿ ಜನಸ್ಪಂದನಾ ಸಭೆ ನಡೆಸಿ ಅವಿಭಜಿತ ಜೇವರ್ಗಿ ತಾಲೂಕಿನ ಸಾರ್ವಜನಿಕರ ಸಮಸ್ಯೆ ಆಲಿಸಿದರು. ಜನಸ್ಪಂದನಾ ಸಭೆಯಲ್ಲಿ ಸಲ್ಲಿಕೆಯಾದ 120 ಅರ್ಜಿಯಲ್ಲಿ 25ಕ್ಕೆ ಸ್ಥಳದಲ್ಲಿಯೇ ಪರಿಹಾರ ಸೂಚಿಸಿದ ಅವರು, ಬಾಕಿ ಉಳಿದ 95 ಅರ್ಜಿಗಳನ್ನು ಸಂಬಂಧಪಟ್ಟ ಇಲಾಖೆಗೆ ರವಾನಿಸಿ, ಕೂಡಲೆ ಇವುಗಳನ್ನು ಪ್ರಥಮಾದ್ಯತೆ ಮೇಲೆ ವಿಲೇವಾರಿ ಮಾಡುವಂತೆ ತಾಲೂಕಾ ಮಟ್ಟದ ಅಧಿಕಾರಿಗಳಿಗೆ ಸೂಚಿಸಿದರು.

ಸಿ.ಸಿ.ರಸ್ತೆ, ಚರಂಡಿ ನಿರ್ಮಾಣ, ಕುಡಿಯುವ ನೀರು, ಶೌಚಾಲಯ, ಸಾಮಾಜಿಕ ಪಿಂಚಣಿಗೆ ಸಂಬಂಧಿಸಿದಂತೆ ಹೆಚ್ಚಿನ ದೂರು ದುಮ್ಮಾನುಗಳಿಗೆ ಕಿವಿಯಾದ ಜಿಲ್ಲಾಧಿಕಾರಿಗಳು, ಸಮಸ್ಯೆ ಹೊತ್ತಿ ಬಂದವರಿಗೆ ಕಾನೂನಾತ್ಮಕವಾಗಿ ಕೆಲಸ ಮಾಡಿಕೊಡುವ ಭರವಸೆ ನೀಡಿದರು. ಇದೇ ಸಂದರ್ಭದಲ್ಲಿ ಕೃಷಿ ಇಲಾಖೆಯಿಂದ ಆಯೋಜಿಸಿದ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬೀಮಾ ಯೋಜನೆ ಮತ್ತು ಬೆಳೆ ಸಮೀಕ್ಷೆ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಜಿಲ್ಲಾಧಿಕಾರಿಗಳು, ಬೆಳೆ ವಿಮೆ-ಬರಗಾಲ ಪರಿಹಾರದಂತ ಸವಲತ್ತು ಪಡೆಯಲು ರೈತರು ಕಡ್ಡಾಯವಾಗಿ ಆಧಾರ್ ಸೀಡಿಂಗ್, ಬ್ಯಾಂಕ್‌ನಲ್ಲಿ ಕೆ.ವೈ.ಸಿ ಮಾಡಿಸಿಕೊಳ್ಳಬೇಕೆಂದು ರೈತ ವರ್ಗಕ್ಕೆ ಕರೆ ನೀಡಿದರು.

**ಕರಪತ್ರ ಬಿಡುಗಡೆ:**

ತೋಟಗಾರಿಕೆ ಇಲಾಖೆಯಿಂದ ಹವಾಮಾನ ಆಧಾರಿತ ತೋಟಗಾರಿಕೆ ಬೆಳೆಗಳಿಗೆ ಬೆಳೆ ವಿಮೆ ಮಾಡಿಸುವ ಸಂಬಂಧ ರೈತರಲ್ಲಿ ಅರಿವು ಮೂಡಿಸಲು ಮುದ್ರಿಸಲಾದ ಕರಪತ್ರಗಳನ್ನು ಡಿ.ಸಿ. ಬಿ.ಫೌಜಿಯಾ ತರನ್ನುಮ್ ಅವರು ಅಧಿಕಾರಿಗಳೊಂದಿಗೆ ಸೇರಿ ಬಿಡುಗಡೆಗೊಳಿಸಿದರು. ಜೇವರ್ಗಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಶರಣಗೌಡ ಬೆಳೆ ವಿಮೆ ಬಗ್ಗೆ ಮಾಹಿತಿ ನೀಡಿದರು. ಸಹಾಯಕ ಆಯುಕ್ತ ಆಶಪ್ಪ ಪೂಜಾರಿ, ಕೃಷಿ ಉಪನಿರ್ದೇಶಕ ಸೋಮಶೇಖರ ಬಿರಾದಾರ, ಜೇವರ್ಗಿ ತಹಶೀಲ್ದಾರ ಮಲ್ಲಣ್ಣ ಯಲಗೊಂಡ, ಯಡ್ರಾಮಿ ತಹಶೀಲ್ದಾರ ಶಶಿಕಲಾ ಪಾದಗಟ್ಟಿ, ಜೇವರ್ಗಿ ತಾಲೂಕ ಪಂಚಾಯತ್ ಇ.ಓ ರೇವಣಸಿದ್ದಪ್ಪ ಸೇರಿದಂತೆ ಜೇವರ್ಗಿ ಮತ್ತು ಯಡ್ರಾಮಿ ತಾಲೂಕಿನ ಅನೇಕ ತಾಲೂಕಾ ಮಟ್ಟದ ಅಧಿಕಾರಿಗಳು ಇದ್ದರು.

# ಕಾರ್ಮಿಕ ಮಂಡಳಿ ಪುನರ್ ರಚನೆಗೆ ಕಟ್ಟಿಸಂಗಾವಿ ಒತ್ತಾಯ




ಕಲಬುರಗಿ:–

ಕಾರ್ಮಿಕ ಮಂಡಳಿಯನ್ನು ಪುನರ್ ರಚಿಸಿ ಕಲ್ಯಾಣ ಕರ್ನಾಟಕದ ಓರ್ವ ಸದಸ್ಯರನ್ನು ಪರಿಗಣಿಸಬೇಕು ಎಂದು ಹಿರಿಯ ಕಾರ್ಮಿಕ ಮುಖಂಡ ಶಂಕರ್ ಕಟ್ಟಿಸಂಗಾವಿ ಅವರು ಆಗ್ರಹಿಸಿದರು. ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶೈಕ್ಷಣಿಕ ಕಡಿತದ ಆದೇಶವನ್ನು ರದ್ದುಪಡಿಸುವಂತೆ, ಸ್ಥಗಿತಗೊಂಡ ಪಿಂಚಣಿ ಹಿಂಬಾಕಿ ಸಹಿತ ಪ್ರಸ್ತುತ ಮ್ಯಾನುವೆಲ್ ಅರ್ಜಿ ಪಡೆದು ಹಣ ಬಿಡುಗಡೆ ಮಾಡುವಂತೆ, ನಗರದಲ್ಲಿ ಜೋಡಿ ಕೊಲೆ ಪ್ರಕರಣದ ಕುಟುಂಬಗಳಿಗೆ ತಲಾ ಐದು ಲಕ್ಷ ರೂ.ಗಳ ಪರಿಹಾರ ಘೋಷಣೆ ಮಾಡುವಂತೆ ಒತ್ತಾಯಿಸಿದರು. ಕಾರ್ಡ್ ನವೀಕರಣದ ಅವಧಿ ಮೊದಲಿನ ಹಾಗೆ ಮೂರು ವರ್ಷಗಳ ಅವಧಿಯನ್ನು ನಿಗದಿಪಡಿಸುವಂತೆ, ಹೊಸ ತಂತ್ರಾಂಶದ ತಾಂತ್ರಿಕ ತೊಂದರೆಗಳನ್ನು ಸರಿಪಡಿಸುವಂತೆ, ಜಿಲ್ಲೆಯಲ್ಲಿ ಕಾರ್ಮಿಕರಿಗಾಗಿ ಸಮುದಾಯ ಭವನ ನಿರ್ಮಿಸುವಂತೆ, ಜಿಲ್ಲೆಯಲ್ಲಿ ಬಹಳ ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ಡಾಟಾ ಎಂಟ್ರಿ ಆಪರೇಟರ್‌ಗಳನ್ನು ಕೂಡಲೇ ಅಂತರ್ ಜಿಲ್ಲಾ ವರ್ಗಾವಣೆ ಮಾಡುವಂತೆ, ನಗರದಲ್ಲಿ ಕಾರ್ಮಿಕರು ಇರುವ ನಾಕಾ ಸ್ಥಳಗಳಲ್ಲಿ ಸಿಸಿಟಿವಿ ಅಳವಡಿಸುವಂತೆ, ಖರೀದಿ ಪ್ರಕ್ರಿಯೆಗಳನ್ನು ಕೂಡಲೇ ನಿಲ್ಲಿಸುವಂತೆ ಅವರು ಆಗ್ರಹಿಸಿದರು. ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಕೊರೋನಾ ಸಂದರ್ಭದಲ್ಲಿ ಸಾವಿರಾರು ಕೋಟಿ ರೂ.ಗಳನ್ನು ಲಪಟಾಯಿಸಿತು. ಐದಾರು ಸಾವಿರ ಕೋಟಿ ರೂ.ಗಳನ್ನು ಕಲ್ಯಾಣ ಮಂಡಳಿಯ ಅನುದಾನ ಖಾಲಿ ಮಾಡಲಾಗಿದೆ. ಆಗ ವಿರೋಧ ಪಕ್ಷದಲ್ಲಿದ್ದ ಕಾಂಗ್ರೆಸ್ ಖಂಡಿಸಿತು. ವಿಶೇಷವಾಗಿ ಪ್ರಿಯಾಂಕ್ ಖರ್ಗೆಯವರು ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ಮಾಡಿ ಬಿಜೆಪಿ ಸರ್ಕಾರದ ಸಾವಿರಾರು ಕೋಟಿ ರೂ.ಗಳ ಹಗರಣದ ಕುರಿತು ಸಮಗ್ರ ತನಿಖೆಗೆ ಒತ್ತಾಯಿಸಿದ್ದರು. ಹಿಂದಿನ ಕಾರ್ಮಿಕ ಸಚಿವ ಶಿವರಾಮ್ ಹೆಬ್ಬಾರ್ ಅವರು ಕಾರ್ಮಿಕ ಮಂಡಳಿಯ ಕಾನೂನುಗಳನ್ನು ಬದಿಗೆ ಸರಿಸಿ ಮನಸೋ ಇಚ್ಛೆ ಕಾರ್ಮಿಕರ ಅನುದಾನವನ್ನು ದುರ್ಬಳಕೆ ಮಾಡಿದರು. ವಿವಿಧ ರೀತಿಯ ಕಿಟ್‌ಗಳಾದ ಟ್ಯಾಬ್, ಟೂಲ್, ಶೈಕ್ಷಣಿಕ ಕಿಟ್, ಪೌಷ್ಠಿಕಾಂಶ ಕಿಟ್, ಸುರಕ್ಷಾ ಕಿಟ್‌ಗಳ ಖರೀದಿಯಲ್ಲಿ ಟೆಂಡರ್ ನಿಯಮಗಳನ್ನು ಉಲ್ಲಂಘಿಸಿ, ಹೆಚ್ಚಿನ ಬೆಲೆಯಲ್ಲಿ ಖರೀದಿಸಿ ಕಲ್ಯಾಣ ಮಂಡಳಿಯ ಹಣವನ್ನು ಲೂಟಿ ಮಾಡಿದ್ದರು ಎಂದು ಅವರು ಆರೋಪಿಸಿದರು. ಹಾಲಿ ಕಾಂಗ್ರೆಸ್ ಸರ್ಕಾರವು ಅಕ್ರಮಕ್ಕೆ ಸಂಬಂಧಿಸಿದಂತೆ ಹೊರತಾಗಿಲ್ಲ. ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರು ಬಂದ ಮೇಲೆ ಲ್ಯಾಪ್‌ಟಾಪ್, ವೈದ್ಯಕೀಯ ತಪಾಸಣೆ ಹಾಗೂ ಅಂಬುಲೆನ್ಸ್ ವಾಹನಗಳ ಖರೀದಿಯಲ್ಲಿ ಬಹುದೊಡ್ಡ ಅನುದಾನ ದುರುಪಯೋಗ ಮಾಡಿದ್ದಾರೆ. ಸಚಿವರು ಸರ್ವಾಧಿಕಾರ ಮೆರೆಯುತ್ತಿದ್ದಾರೆ. ಕಾರ್ಮಿಕರ ಮಂಡಳಿಯನ್ನು ಪುನರ್ ರಚಿಸದೇ ಎಲ್ಲ ನಿರ್ಧಾರಗಳನ್ನು ಜಾರಿಗೆ ತರಲಾಗುತ್ತಿದೆ. ಹಾಗಾಗಿ ಕೂಡಲೇ ಕಾರ್ಮಿಕರ ಕಲ್ಯಾಣ ಮಂಡಳಿಯನ್ನು ಪುನರ್ ರಚಿಸಬೇಕು ಎಂದು ಅವರು ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ಶ್ರೀಮಂತ್ ಬಿರಾದಾರ್, ಪ್ರಭುದೇವ್ ಯಳಸಂಗಿ, ಅಶೋಕ್ ಘೂಳಿ, ಹಣಮಂತರಾಯ್ ಬಿ. ಪೂಜಾರಿ, ಮಲ್ಲಿಕಾರ್ಜುನ್ ಮಾಳಗೆ, ಶಿವಲಿಂಗ್ ಹಾವನೂರ್, ನಾಗಯ್ಯ ಜಿ. ಸ್ವಾಮಿ, ಶಿವಕುಮಾರ್ ಮಠಪತಿ, ಶಿವಲಿಂಗಮ್ಮ, ಭೀಮರಾಯ್ ಕಂದಳ್ಳಿ, ಅಲ್ಲಾವುದ್ದೀನ್, ಮೊಹಸೀನ್ ಪಟೇಲ್, ದೇವಿಂದ್ರ ಉಳ್ಳಾಗಡ್ಡಿ, ಸಂಜುಕುಮಾರ್ ಮುಂತಾದವರು ಉಪಸ್ಥಿತರಿದ್ದರು.

# ಹಬೋಹಳ್ಳಿ : ಗದ್ದಿಕೇರಿ ಗ್ರಾಮದಲ್ಲಿ ಸೆರೆ ಸಿಕ್ಕ ಕರಡಿ

ಹಗರಿಬೊಮ್ಮನಹಳ್ಳಿ:–

ತಾಲೂಕಿನ ಗದ್ದಿಕೇರಿ ಗ್ರಾಮದಲ್ಲಿ ಮರವೇರಿ ಕುಳಿತಿದ್ದ ಕರಡಿಯನ್ನು ಗುರುವಾರ ಅರಣ್ಯಾಧಿಕಾರಿಗಳು ಸೆರೆ ಹಿಡಿಯುವಲ್ಲಿ ಯಶಸ್ವಿಯಾದರು. ಗ್ರಾಮದ ಚಲವಾದಿ ಓಣಿಯಲ್ಲಿ ಬೆಳಗ್ಗೆ 6 ಗಂಟೆಗೆ ಪ್ರತ್ಯಕ್ಷವಾದ ಕರಡಿಯನ್ನು ನೋಡಿ ಜನರು ಆತಂಕದಿಂದ ಭಯಭೀತರಾಗಿದ್ದರು. ಜನರು ಕೂಗಾಡಿ ಗಲಾಟೆ ಮಾಡಿದ್ದರಿಂದ ಕರಡಿ ಹತ್ತಿರದ ಮರವೇರಿ ಕುಳಿತಿದೆ. ತಕ್ಷಣ ವಿಷಯವನ್ನು ಅರಣ್ಯ ಇಲಾಖೆ ಅಧಿಕಾರಿಗಳಿಗೆ ತಿಳಿಸಿದರು. ಸ್ಥಳಕ್ಕೆ ಬಂದ ಅಧಿಕಾರಿಗಳು ಹಾಗೂ ಸಿಬ್ಬಂದಿ ಕಾರ್ಯಾಚರಣೆ ಶುರು ಮಾಡುವ ಮೂಲಕ ಕರಡಿಗೆ ಅರವಳಿಕೆ ಔಷಧಿ ನೀಡಿ ಪ್ರಜ್ಞೆ ತಪ್ಪಿಸಿ ಬಳಿಕ ಕೆಳಗಿಳಿಸಿ ಕರಡಿಯ ಕುತ್ತಿಗೆಗೆ ಗಾಯವಾಗಿದ್ದಕ್ಕೆ ಚಿಕಿತ್ಸೆ ನೀಡಿದರು. ಅರಣ್ಯಾಧಿಕಾರಿ ಕರಿಬಸಪ್ಪ ಮಾತನಾಡಿ ಇಲಾಖೆಯ ಮೇಲಾಧಿಕಾರಿಗಳಿಗೆ ತಿಳಿಸಿ ಕರಡಿಯನ್ನು ಕರಡಿದಾಮವಾದ ದರೋಜಿಕೆರೆಗೆ ಬಿಡಲಾಗುವುದು ಎಂದು ತಿಳಿಸಿದರು.

## ಒಂದನೇ ಪುಟದಿಂದ

# ಬೆಂಗಳೂರಿನಲ್ಲಿ ಡೆಂಗ್ಯೂನಿಂದ ಬಾಲಕ ಸಾವು, ಝಿಕಾ ಸೋಂಕಿನ ಆತಂಕ

ಬಿಬಿಎಂಪಿ ವ್ಯಾಪ್ತಿಯಲ್ಲಿ ಒಟ್ಟು 107 ಹೊಸ ಕೇಸ್‌ಗಳು ಪತ್ತೆಯಾಗಿದ್ದು, ರಾಜ್ಯದಲ್ಲಿ ಒಟ್ಟಾರೆ 343 ಸಕ್ರಿಯ ಡೆಂಗ್ಯೂ ಪ್ರಕರಣಗಳು ಇವೆ. ಡೆಂಗ್ಯೂ ಸೋಂಕಿನಿಂದ ಜನವರಿಯಿಂದ ಈವರೆಗೆ ಒಟ್ಟು 6 ಮಂದಿ ಮೃತಪಟ್ಟಿದ್ದಾರೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕೃತ ಮಾಹಿತಿ ನೀಡಿದೆ.

ಧಾರವಾಡದಲ್ಲೂ ಡೆಂಗ್ಯು ಪ್ರಕರಣಗಳು ಹೆಚ್ಚಾಗಿವೆ. ಜಿಲ್ಲೆಯಲ್ಲಿ ಒಂದೇ ತಿಂಗಳಲ್ಲಿ 134 ಪ್ರಕರಣಗಳು ದಾಖಲಾಗಿವೆ. ಡೆಂಗ್ಯುಗೆ ಕಳೆದ ತಿಂಗಳು ಧಾರವಾಡ ತಾಲ್ಲೂಕಿನ ಮುಮ್ಮಿಗಟ್ಟೆ ಗ್ರಾಮದ 4 ವರ್ಷದ ಬಾಲಕಿ ಡೆಂಗ್ಯು ಜ್ವರಕ್ಕೆ ಬಲಿಯಾಗಿದ್ದಳು.

ಡೆಂಗ್ಯು ನಿಯಂತ್ರಣಕ್ಕೆ ಸ್ವಚ್ಛತೆ ಕಾಪಾಡುವಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುತ್ತದೆ. ಕೊಳಚೆ ನೀರು ನಿಲ್ಲದಂತೆ ಎಚ್ಚರಿಕೆ ವಹಿಸಿ ಮನೆಯ ಸುತ್ತಮುತ್ತ ಪರಿಸರ ಕಾಪಾಡಿಕೊಳ್ಳಬೇಕು ಎಂದು ಮಹಾನಗರ ಪಾಲಿಕೆ ಜಾಗೃತಿ ಮೂಡಿಸಿದೆ.

**ಝಿಕಾ ವೈರಸ್‌ಗೆ ವೃದ್ಧ ಬಲಿ!**

ಡೆಂಗ್ಯೂ ಜ್ವರದ ಭೀತಿಯ ನಡುವೆ ಜಿಲ್ಲೆಯಲ್ಲಿ ಝಿಕಾ ವೈರಸ್ ಪತ್ತೆಯಾಗಿದೆ. ಶಿವಮೊಗ್ಗದಲ್ಲಿ ಝಿಕಾ ವೈರಸ್ ಗೆ ಚಿಕಿತ್ಸೆ ಪಡೆದು ಗುಣಮುಖರಾದ ವೃದ್ಧ ಸಾವು ಕಂಡರೆ, ಸಾಗರದಲ್ಲಿ ಯುವಕನೋರ್ವನಲ್ಲಿ ರೋಗ ಪತ್ತೆಯಾಗಿದೆ.ಶಿವಮೊಗ್ಗ ಜಿಲ್ಲೆಯಲ್ಲಿ ಝಿಕಾಗೆ ಪತ್ತೆಯಾದ ಮೊದಲ ವ್ಯಕ್ತಿ ಸಾವು ಕಂಡಿದ್ದಾರೆ. ಶಿವಮೊಗ್ಗದ ಗಾಂಧಿ ನಗರದ 74 ವರ್ಷದ ವೃದ್ಧ ಮನೆಯಲ್ಲಿ ಸಾವು ಕಂಡಿದ್ದಾರೆ. ಜೂ. 19 ರಂದು ತೀವ್ರ ಜ್ವರದಿಂದ ಬಳಲುತ್ತಿದ್ದರು.ಜೂ. 21 ರಂದು ಝಿಕಾ ವೈರಸ್ ಪತ್ತೆ ಆಗಿತ್ತು. ಶಿವಮೊಗ್ಗದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ್ದರು. ಆಸ್ಪತ್ರೆಯಿಂದ ಡಿಸ್ಚಾರ್ಜ್ ಮಾಡಿ ಗುರುವಾರ ಮನೆಗೆ ವಾಪಾಸ್ ಆಗಿದ್ದರು. ಗುಣಮುಖರಾದವರು ನಿನ್ನೆ ಮನೆಯಲ್ಲಿ ಸಾವುಕಂಡಿದ್ದಾರೆ. ಜ್ವರ ಮಾತ್ರವಲ್ಲದೇ ವಿವಿದ ಕಾಯಿಲೆಯಿಂದ ಅವರು ಬಳಲುತ್ತಿದ್ದರು.

24 ವರ್ಷದ ಯುವಕನಲ್ಲಿ ಝಿಕಾ ವೈರಸ್ ಪತ್ತೆಯಾಗಿರುವುದರಿಂದ ಜಿಲ್ಲೆಯಲ್ಲಿ ರೋಗಗಳ ಭೀತಿ ಹೆಚ್ಚಾಗಿದೆ.ಸಾಗರ ಮೂಲದ ಯುವಕನಲ್ಲಿ ಝಿಕಾ ವೈರಸ್ ಪತ್ತೆಯಾಗಿದೆ.

# ಅಪರಾಧಿಗಳಿಗೆ ಮುಲಾಜಿಲ್ಲದೆ ಅಂಕುಶ ಹಾಕಿ: ಸಿಎಂ

ಡಿಸಿಪಿಗಳು ಪೊಲೀಸ್ ಮ್ಯಾನ್ಯುಯಲ್ ತಮ್ಮ ವ್ಯಾಪ್ತಿಯ ಪ್ರಕಾರ ಪ್ರತಿ ಠಾಣೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸುವುದು ಕಡ್ಡಾಯ ಎಂದು ಹೇಳಿದರು.ನಗರದ ರಾಜ್ಯ ಪೊಲೀಸ್ ಮಹಾ ನಿರ್ದೇಶಕರ ಕಚೇರಿಯಲ್ಲಿ 2024ರ ಹಿರಿಯ ಪೊಲೀಸ್ ಅಧಿಕಾರಿಗಳ ಸಮಾವೇಶವನ್ನು ಉದ್ಘಾಟಿಸಿ, ನೂತನ ತಂತ್ರಾಂಶಗಳನ್ನು ಬಿಡುಗಡೆಗೊಳಿಸಿ ಮಾತನಾಡಿದರು.ನಿಮ್ಮ ವ್ಯಾಪ್ತಿಯಲ್ಲಿ ಕ್ಲಬ್ ಗಳು, ಇಸ್ಪೀಟ್, ಬೆಟ್ಟಿಂಗ್, ಡ್ರಗ್ಸ್ ಗಳನ್ನು ನಿಲ್ಲಿಸದಿದ್ದರೆ ಎಸ್ ಪಿ ಮತ್ತು ಐಜಿ ಮಟ್ಟದ ಅಧಿಕಾರಿಗಳನ್ನೂ ನೇರ ಹೊಣೆ ಮಾಡಿ ಕ್ರಮ ತೆಗೆದುಕೊಳ್ಳಲಾಗುವುದು. ಎಸ್ ಪಿ ಐಜಿ ಗಳು ಪ್ರತಿ ಠಾಣೆಗಳಿಗೆ ಹೋಗಿ ಪರಿಶೀಲನೆ ನಡೆಸಿದರೆ ಇವನ್ನೆಲ್ಲಾ ತಪ್ಪಿಸಬಹುದು ಎಂದು ಎಚ್ಚರಿಸಿದರು.ನಾಳೆಯಿಂದಲೇ ಎಸ್ ಪಿ ಐಜಿ ಗಳು ಠಾಣೆಗಳಿಗೆ ಭೇಟಿ ನೀಡಬೇಕು. ಭೇಟಿ ನೀಡಿ ಅರ್ಧಗಂಟೆಯಲ್ಲಿ ಶಾಸ್ತ್ರ ಮುಗಿಸಬಾರದು. ಕೂಲಂಕುಶ ಪರಿಶೀಲನೆ ನಡೆಸಬೇಕು ಎಂದು ಎಚ್ಚರಿಸಿದರು.ತಪ್ಪುಗಳನ್ನು ಸರಿಮಾಡಿಕೊಂಡು ಗುಣಾತ್ಮಕ ಪೊಲೀಸ್ ವ್ಯವಸ್ಥೆ ಗಟ್ಟಿಗೊಳಿಸುವ ಮೂಲಕ ದೇಶದಲ್ಲಿ ಕರ್ನಾಟಕ ಪೊಲೀಸ್ ಗೆ ಇರುವ ಉನ್ನತ ಹೆಸರನ್ನು ಉಳಿಸಿ-ಬೆಳೆಸಬೇಕು ಎಂದರು.ಸಮಾಜದಲ್ಲಿ ಎಲ್ಲರೂ ನಿಶ್ಚಿಂತೆಯಿಂದ, ಭಯ ಮುಕ್ತವಾಗಿ ವಾಸಿಸುವ ವಾತಾವರಣ ಇರಬೇಕು. ಮಹಾತ್ಮಗಾಂಧಿ ಅವರ ಮಾತು ಪ್ರಸ್ತಾಪಿಸಿ ಅಧಿಕಾರಿಗಳಿಗೆ ಸೂಚನೆ ನೀಡಿದರು.ಕಾನೂನು ಸುವ್ಯವಸ್ಥೆ ಸುರಕ್ಷಿತವಾಗಿದ್ದರೆ ಅಭಿವೃದ್ಧಿ, ಬಂಡವಾಳ ಹೂಡಿಕೆ, ಉದ್ಯೋಗ ಸೃಷ್ಟಿ ಸಾಧ್ಯ. ಇವೆಲ್ಲದರಿಂದ ತಲಾ ಆದಾಯ, ಜಿಡಿಪಿ ಬೆಳವಣಿಗೆ ಆಗಲಿದೆ.ನಮ್ಮ ಸಮಾಜ ಜಾತಿ ವ್ಯವಸ್ಥೆಯಿಂದಾಗಿ ಅಸಮಾನತೆಯಿಂದ ಕೂಡಿದೆ,ಹಿರಿಯ ಪೊಲೀಸ್ ಅಧಿಕಾರಿಗಳು ನಿಮ್ಮ ಜವಾಬ್ದಾರಿಗಳನ್ನು, ಕರ್ತವ್ಯಗಳನ್ನು ಸರಿಯಾಗಿ ನಿರ್ವಹಿಸಿದರೆ ನಿಮ್ಮ ಕೆಳಗಿನಅಧಿಕಾರಿಗಳು ಇನ್ನಷ್ಟು ಪರಿಣಾಮಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಾರೆ ಎಂದು ಹೇಳಿದರು.ಬೀಟ್ ವ್ಯವಸ್ಥೆ, ಸಂಚಾರ ವ್ಯವಸ್ಥೆ, ಹೈವೇ ಪ್ಯಾಟ್ರೋಲಿಂಗ್ ವ್ಯವಸ್ಥೆಯನ್ನು ತೀವ್ರ ಪರಿಣಾಮಕಾರಿಯಾಗಿ ನಿರ್ವಹಿಸಲು ಸಿಎಂ ಸೂಚನೆ ನೀಡಿದರು.

ಹುಬ್ಬಳ್ಳಿಯಲ್ಲಿ ಒಂದರ ಹಿಂದೆ ಮತ್ತೊಂದು ಕೊಲೆಗಳು ನಡೆದವು. ಇಂಟೆಲಿಜೆಂಟ್ ಪೊಲೀಸರು ಎಚ್ಚರ ಇದ್ದಿದ್ದರೆ ಎರಡನೇ ಕೊಲೆ ತಪ್ಪಿಸಬಹುದಿತ್ತು. ಅದಕ್ಕೇ ಹಿರಿಯ ಅಧಿಕಾರಿಗಳನ್ನು ಸಸ್ಪೆಂಡ್ ಮಾಡಬೇಕಾಯಿತು. ಇವರ ನಿರ್ಲಕ್ಷ್ಯದಿಂದ ಕೊಲೆ ಆಗಿದೆ. ಈ ಕೊಲೆ ತಪ್ಪಿಸಬಹುದಿತ್ತು ಎಂದು ಹೇಳಿದರು.

**ಸುಳ್ಳು ಸುದ್ದಿ ತಡೆಗಟ್ಟಿ:**

ಸುಳ್ಳು ಸುದ್ದಿ ತಡೆಗಟ್ಟಿಗಳು ಸಮಾಜದ ನೆಮ್ಮದಿಗೆ ಕಂಟಕವಾಗಿವೆ. ಇವು ವಿಪರೀತ ಹೆಚ್ಚಾಗುತ್ತಿವೆ. ಇವುಗಳ ತಡೆಗೆ ಫ್ಯಾಕ್ಟ್ ಚೆಕ್ ಘಟಕಗಳನ್ನು ಮಾಡಿದ್ದೇವೆ. ಆದರೂ ಸುಳ್ಳು ಸುದ್ದಿ ತಡೆಗಟ್ಟಿಗಳು ಹೆಚ್ಚಾಗುತ್ತಿವೆ. ಇದನ್ನು ಸಹಿಸಲು ಸಾಧ್ಯವಿಲ್ಲ. ಸದ್ಯ ಸುಳ್ಳು ಸುದ್ದಿ ತಡೆಗಟ್ಟಿ ತಡೆಯಲು ಆಗುತ್ತಿರುವ ಕೆಲಸ ಸಾಲುತ್ತಿಲ್ಲ ಎಂದು ಎಚ್ಚರಿಸಿದರು.

**ಡ್ರಗ್ಸ್ ಪೂರ್ತಿ ನಿಂತಿಲ್ಲ ಏಕೆ?**

ಡ್ರಗ್ಸ್ ಮಾರೋರು ಯಾರು? ರೌಡಿಗಳು ಯಾರು? ರಿಯಲ್ ಎಸ್ಟೇಟ್ ಮಾಡೋರು ಯಾರು ಎನ್ನುವುದು ಆಯಾ ಠಾಣಾಧಿಕಾರಿಗಳಿಗೆ ಗೊತ್ತಿರಲಿದೆ. ಆದರೂ ಯಾಕೆ ನಿಲ್ಲುತ್ತಿಲ್ಲ ಎಂದು ಪ್ರಶ್ನಿಸಿದರು.ನಿಮಗೆ ಗನ್ ಗಳನ್ನು ಕೊಟ್ಟಿರುವುದು ಏಕೆ ? ಈ ಬಗ್ಗೆ ರೌಡಿಗಳಿಗೆ ಏಕೆ ಭಯವಿಲ್ಲ. ರೌಡಿಗಳಿಗೆ ಪೊಲೀಸ್ ಭಯ ಇರಬೇಕು ಎಂದು ಎಚ್ಚರಿಸಿದರು.ಕೆಲವು ಪೊಲೀಸರಿಗೆ ಇ-ಬೀಟ್ ವ್ಯವಸ್ಥೆ ಜಾರಿಯಲ್ಲಿರುವುದೇ ಗೊತ್ತಿಲ್ಲ ಎಂದರೆ ನಾಚಿಕೆಗೇಡು. ಇದನ್ನು ಸರಿಪಡಿಸಿಕೊಳ್ಳಿ ಎಂದು ಸಲಹೆ ನೀಡಿದರು.

**ಗೃಹ ಸಚಿವರಿಗೆ ಅಭಿನಂದನೆ:**

ಕಳೆದ ಒಂದು ವರ್ಷದಲ್ಲಿ ರಾಜ್ಯದಲ್ಲಿ ಕೋಮುಗಲಭೆ ಇಲ್ಲದಂತೆ ಕಾನೂನು ಸುವ್ಯವಸ್ಥೆ ಕಾಪಾಡಿದಕ್ಕೆ ಗೃಹ ಸಚಿವರಿಗೆ, ಕರ್ನಾಟಕ ಪೊಲೀಸ್ ಗೆ ಮುಖ್ಯಮಂತ್ರಿಗಳು ಅಭಿನಂದಿಸಿದರು. ಗೃಹ ಸಚಿವ ಜಿ.ಪರಮೇಶ್ವರ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಸರ್ಕಾರದ ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್, ಗೃಹ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಎಸ್.ಆರ್.ಉಮಾಶಂಕರ್, ಡಿಜಿ-ಐಜಿ ಡಾ.ಅಲೋಕ್ ಮೋಹನ್, ಸರ್ಕಾರದ ಕಾರ್ಯದರ್ಶಿ ಕೆ.ವಿ.ತ್ರಿಲೋಕ್ ಚಂದ್ರ ಅವರುಗಳು ಉಪಸ್ಥಿತರಿದ್ದರು.

# ಜು. 13 ಜಗಜೀವನ್ ರಾಂ ಭವನ ಲೋಕಾರ್ಪಣೆ

ಎಂದರು. **ಕೇಂದ್ರ ವಿರುದ್ಧ ಸಿಎಂ ಕಿಡಿ** ಕೇಂದ್ರ ಭಾರತಕ್ಕೆ ಯೋಜನೆಯನ್ನು ಚುನಾವಣೆ ಸಲುವಾಗಿ ಆರಂಭಿಸಿರುವುದು ಸ್ಪಷ್ಟವಾಗುತ್ತಿದೆ. ಬಡವರಿಗೆ ಅಕ್ಕಿ ವಿತರಣೆಗೆ ಕೇಂದ್ರ ಸರ್ಕಾರ ಅಕ್ಕಿ ಕೊಡದೆ ದಲಿತರು, ಬಡವರು, ಹಿಂದುಳಿದವರ ವಿರೋಧಿಯಾಗಿದ್ದಾರೆ ಎಂದು ಆರೋಪಿಸಿದರು. ಬೆಂಗಳೂರಿನೊಂದಿಗೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಅನ್ನಭಾಗ್ಯ ರಾಜ್ಯ ಸರ್ಕಾರ ಅಕ್ಕಿ ಕೇಳಿದ ವೇಳೆ ಭಾರತೀಯ ಆಹಾರ ನಿಗಮದಲ್ಲಿ ದಾಸ್ತಾನು ಇದ್ದರೂ ಉದ್ದೇಶಪೂರ್ವಕವಾಗಿ ಅಕ್ಕಿ ಕೊಡಲಿಲ್ಲ. ಇದರಿಂದಾಗಿ ರಾಜ್ಯದ ಜನರಿಗೆ ಹೆಚ್ಚುವರಿಯಾಗಿ ಹಣ ನೀಡಬೇಕಾದ ಪರಿಸ್ಥಿತಿ ಎದುರಾಗಿತ್ತು ಎಂದರು.

# ಮುಡಾ, ವಾಲ್ಮೀಕಿ ಹಗರಣ: ಸಿಎಂ ಶಾಮೀಲು

ಮಹದಾಯಿ ಯೋಜನೆಗೂ ಸಮಿತಿಯನ್ನು ನೇಮಕ ಮಾಡಲಾಗಿದೆ ಎಂದ ಅವರು ಮಹದಾಯಿ ಪ್ರವಾಹ ಸಮಿತಿಯು ಯೋಜನಾ ಪ್ರದೇಶಕ್ಕೆ ಭೇಟಿ ನೀಡಲಿದೆ, ಮಹದಾಯಿ ವ್ಯಾಪ್ತಿಯಲ್ಲಿ ಏನೆಲ್ಲ ಚಟುವಟಿಕೆ ನಡೆದಿವೆ ಎನ್ನುವುದರ ಅಧ್ಯಯನ ಮಾಡುತ್ತದೆ ಹಾಗೆಂದು ಈ ಸಮಿತಿ ಕೇಂದ್ರಕ್ಕೆ ವರದಿ ನೀಡುವುದಿಲ್ಲ ಎಂದು ತಿಳಿಸಿದರು. ಈಗಾಗಲೇ ಮಹದಾಯಿ ಯೋಜನೆಯ ಡಿಪಿಎಆರ್‌ಗೆ ಕೇಂದ್ರ ಸರ್ಕಾರ ಅನುಮತಿ ಕೊಟ್ಟಿದೆ. 52 ಹೆಕ್ಟೇರ್ ಪ್ರದೇಶದ ದಟ್ಟ ಅರಣ್ಯದಲ್ಲಿ ಯೋಜನೆ ಕೈಕೊಳ್ಳಲು ಅನುಮತಿ ಬೇಕಿದೆ, ಟೈಗರ್ ಕಾರಿಡಾರ್‌ನಲ್ಲಿ ಅನುಮತಿ ಅಗತ್ಯವಿದ್ದು, ವನ್ಯ ಜೀವಿ ಮಂಡಳಿ ಅನುಮತಿ ಸಿಕ್ಕರೆ ಯೋಜನೆ ಆರಂಭವಾಗುತ್ತದೆ ಎಂದು ಅವರು ಹೇಳಿದರು. ಪ್ರವಾಹ ಸಮಿತಿ ಭೇಟಿಯಿಂದ ಕರ್ನಾಟಕಕ್ಕೆ ಯಾವುದೇ ರೀತಿ ಧಕ್ಕೆ ಇಲ್ಲ, ಈಗಾಗಲೇ ಕೇಂದ್ರ ಕೊಟ್ಟಿರುವ ಡಿಪಿಎಆರ್ ಅನುಮತಿಗೂ ತೊಂದರೆ ಆಗುವುದಿಲ್ಲ ಎಂದು ಅವರು ತಿಳಿಸಿದರು.

# ಅಲೆಮಾರಿ ಸಮುದಾಯ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹ

ರಾಯಚೂರು:-

ಕಷ್ಟದ ಜೀವನ ನಿರ್ಮಾಣ ಮಾಡುತ್ತಿರುವ ಪರಿಶಿಷ್ಟ ಪಂಗಡದ ಅಲೆಮಾರಿ ಜನಾಂಗದ ಮೇದಾ ಸಮುದಾಯದ ಕುಂದು ಕೊರತೆಗಳು ಹಾಗೂ ವಿವಿಧ ಬೇಡಿಕೆಗಳು ಈಡೇರಿ ಸುವಂತೆ ಒತ್ತಾಯಿಸಿ ಜಿಲ್ಲಾ ಮಟ್ಟದ ಅಲೆಮಾರಿ ಅಭಿವೃದ್ಧಿ ಅನುಷ್ಠಾನ ಸಮತಿ ಪದಾಧಿಕಾರಿಗಳು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು. ಸಮುದಾಯ 50 ಕ್ಕೂ ಹೆಚ್ಚು ಕುಟುಂಬಗಳು ಇಂದಿಗೂ ವಸತಿಗಳು ಇಲ್ಲದೆ ರಸ್ತೆ ಬದಿಯಲ್ಲಿ ಜೀವನ ಸಾಗಿಸುತ್ತಿದ್ದಾರೆ.ಇಂದಿಗೂ ಜಿಲ್ಲೆ ಯಲ್ಲಿ 300 ಕ್ಕೂ ಹೆಚ್ಚು ಕುಟುಂಬ ಗಳು ಬಿದಿರಿನ ಮೇಲೆ ಅವಲಂಬಿತ ವಾಗಿದ್ದು ಬಿದಿರು ಸಕಾಲಕ್ಕೆ ಸಿಗದೆ ಬಿದಿರಿನ ಪರಿಕರಗಳನ್ನು ತಯಾರಿಸಲು ಆಗದೆ ಜೀವನ ನಡೆಸಲು ಕಷ್ಟಕರವಾಗಿದೆ. ಇತ್ತೀಚಿಗೆ ಪ್ಲಾಸ್ಟಿಕ್ ಮರ, ಪುಟ್ಟಿಗಳು ಬಂದಿರುವದರಿಂದ ನಮ್ಮ ಕುಲಕಸುಬಿಗೆ ಬೇಡಿಕೆ ಕಡಿಮೆಯಾಗಿ ರುತ್ತದೆ. ವಸತಿ ರಹಿತ ಕುಟುಂಬಗಳಿಗೆ ವಸತಿ ಕಲ್ಪಿಸಿಕೊಡುವುದು.ಸರಕಾರ ದಿಂದ ಸಮುದಾಯದ ಪ್ರತಿ ಕುಟುಂಬಗಳಿಗೆ ಉಚಿತವಾಗಿ ಬೊಂಬುಗಳನ್ನು ಪೂರೈಸುವುದು. ಪ್ಲಾಸ್ಟಿಕ್ ಗೆ ಪರ್ಯಾಯವಾದದ್ದು ಹಾಗೂ ಟ ಸಬ್ಸಿಡಿಯಲ್ಲಿ ಒದಿಗಿಸಿಕೊಡು ವದು. ಈ ಸಂದರ್ಭದಲ್ಲಿ ವಿನೋದ ರಾಜ್ ಸೇರಿದಂತೆ ಉಪಸ್ಥಿತರಿದ್ದರು.

# ಡೆವಿಲ್ ನಿರ್ದೇಶಕರಿಗೆ ಪೊಲೀಸ್ ಗ್ರಿಲ್

**ಮೋಹನ್ ರಾಜ್ ವಿಚಾರಣೆ:**

ದರ್ಶನ್ ಅವರಿಗೆ 40 ಲಕ್ಷ ರೂ. ನೀಡಿದ್ದ ಹಿನ್ನೆಲೆ, ನಟನ ಪರಿಚಿತರೂ ಆಗಿರುವ ಬಿಬಿಎಂಪಿ ಮಾಜಿ ಉಪಮೇಯರ್ ಮೋಹನ್ ರಾಜ್ ಅವರಿಗೆ ವಿಚಾರಣೆಗೆ ಹಾಜರಾಗುವಂತೆ ಪೊಲೀಸರು ನೋಟಿಸ್ ನೀಡಿದ್ದರು. ಸೂಚನೆ ಮೇರೆಗೆ, ನಿನ್ನೆ ಬಸವೇಶ್ವರ ನಗರ ಠಾಣೆಗೆ ಆಗಮಿಸಿ ತನಿಖಾಧಿಕಾರಿ ಎಸಿಪಿ ಚಂದನ್ ಕುಮಾರ್ ಎದುರು ವಿಚಾರಣೆಗೊಳಗಾದರು.ನಂತರ ಮಾಧ್ಯಮದವರೊಂದಿಗೆ ಪ್ರತಿಕ್ರಿಯಿಸಿ, "ಕೊಲೆ ಕೇಸ್‌ನಲ್ಲಿ ನನ್ನ ಯಾವುದೇ ಪಾತ್ರವಿಲ್ಲ. ದರ್ಶನ್ ಮತ್ತು ನಾನು ಪರಿಚಿತರು. ನಟನಿಂದ ಪಡೆದುಕೊಂಡಿದ್ದ ಹಣವನ್ನು ವಾಪಸ್ ಕೊಟ್ಟಿದ್ದೆ. ಲಿಖಿತ ರೂಪದಲ್ಲಿ ಪೊಲೀಸರ ಪ್ರಶ್ನೆಗಳಿಗೆ ಉತ್ತರಿಸಿದ್ದೇನೆ. ಪ್ರಕರಣ ತನಿಖಾ ಹಂತದಲ್ಲಿರುವುದರಿಂದ ಹೆಚ್ಚೇನು ಹೇಳುವುದಿಲ್ಲ" ಎಂದು ತಿಳಿಸಿದರು.

# ಸಂಪೂರ್ಣ ಅಭಿಯಾನದ ಯಶಸ್ವಿಗೆ ಸಹಕರಿಸಿ: ಡಿಸಿ ಭೂಬಾಲನ್

ಮಹತ್ವಕಾಂಕ್ಷಿಯ ತಾಲೂಕುಗಳಲ್ಲಿ ಆರು ಪ್ರಮುಖ ಸೂಚಕಗಳು ಸಂಪೂರ್ಣತೆಯನ್ನು ಸಾಧಿಸಲು ಸುಸ್ಥಿರ ಪ್ರಯತ್ನವನ್ನು ಕೈಗೊಳ್ಳಲು ನೀತಿ ಆಯೋಗವು ಜುಲೈ 3 ರಿಂದ ಸಪ್ಟಂಬರ್ 30ರವರೆಗೆ ಈ ಅಭಿಯಾನವನ್ನು ಹಮ್ಮಿಕೊಂಡಿದೆ ಅಭಿಯಾನದ ಯಶಸ್ವಿಗಾಗಿ ಸಂಬಂಧಿಸಿದ ನಮ್ಮ ಇಲಾಖೆ ಎಲ್ಲಾ ಅಧಿಕಾರಿಗಳು ಕ್ರಿಯಾಶೀಲತೆಯೊಂದಿಗೆ ಕೆಲಸ ಮಾಡಿ ಶೇ.100 ರ ಗುರಿ ಸಾಧನೆಗೆ ಶಕ್ತಿ ಮೀರಿ ಪ್ರಯತ್ನಿಸುತ್ತಾರೆ ಕಳೆದ ವರ್ಷದಲ್ಲಿ ಸಂಕಲ್ಪ ಸಪ್ತಾಹ ಆಯೋಜನೆ ಮಾಡಲಾಗಿತ್ತು ಇದರಲ್ಲಿ 39 ಸೂಚ್ಯಂಕಗಳನ್ನು ತೆಗೆದುಕೊಳ್ಳಲಾಗಿತ್ತು ಆದರೀಗ ಅದರಿಂದ ಕೇವಲ ಆರು ಸೂಚ್ಯಂಕಗಳನ್ನು 3 ತಿಂಗಳ ಒಳಗಾಗಿ ಸಾಧಿಸಲು ತೆಗೆದುಕೊಳ್ಳಲಾಗಿದೆ. ಇವುಗಳಲ್ಲಿ ಮೂರು ಆರೋಗ್ಯ ಇಲಾಖೆಗೆ ಒಂದು ಕೃಷಿ ಒಂದು ಮಹಿಳಾ ಮತ್ತುಮಕ್ಕಳ ಕಲ್ಯಾಣ ಇಲಾಖೆ ಹಾಗೂ ಒಂದು ಸಾಮಾಜಿಕ ಅಭಿವೃದ್ಧಿಗೆ ಸಂಬಂಧಿಸಿದ್ದಾಗಿದೆ ಎಂದರು. ಜಿಲ್ಲಾ ಯೋಜನಾಧಿಕಾರಿ ಎನ್.ಕೆ. ಗೋಟೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಎಎನ್ ಫಲಾನುಭವಿಗಳಿಗೆ ಮಾತೃ ಸುರಕ್ಷಾ ಕಾರ್ಡ್ ಹಾಗೂ ಸುಕನ್ಯಾ ಸಮೃದ್ಧಿ ಯೋಜನೆ ಫಲಾನುಭವಿಗಳಿಗೆ ಪಾಸ್ ಬುಕ್ ವಿತರಣೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ಸಂಪೂರ್ಣತ ಅಭಿಯಾನದ ಪ್ರತಿಜ್ಞಾ ವಿಧಿ ಭೋದಿಸಲಾಯಿತು. ತಮದಡ್ಡಿ ಗ್ರಾಮದ ಪ್ರಗತಿಪರ ರೈತ ಕೃಷಿ ಪಂಡಿತ ಬಸನಗೌಡ ಕನಕರೆಡ್ಡಿ ಸಾವಯವ ಕೃಷಿಯ ಕುರಿತು ತಮ್ಮ ಅನುಭವ ಹಂಚಿಕೊಂಡರು. ವೇದಿಕೆಯಲ್ಲಿ ನೀತಿ ಆಯೋಗದ ಸಹಾಯಕ ನಿರ್ದೇಶಕಿ ಶ್ರೀಮತಿ ಬಬಿತಾ ಸೂರ್ಯವಂಶಿ.ಜಿಪಂ. ಮುಖ್ಯ ಯೋಜನಾಧಿಕಾರಿ ಎನ್.ಕೆ.ಗೋಟೆ. ಸಹಾಯಕ ಯೋಜನಾಧಿಕಾರಿ ಎ.ಬಿ. ಅಲ್ಲಾಪೂರ. ಸಿಡಿಪಿಓ ಸಿ.ಬಿ.ಕುಂಬಾರ.ಪಿಆರ್ಡಿ ಇಇ ನಬಿಲಾಲ. ಜಂಟಿ ಕೃಷಿ ನಿರ್ದೇಶಕ ರಾಜಶೇಖರ್ ವಿಲಿಯಮ್ಸ್. ಉಪ ಕೃಷಿ ನಿರ್ದೇಶಕ ಪ್ರಕಾಶ ಚೌವಾಣ. ತಹಸಿಲ್ದಾರ್ ಪ್ರೇಮಸಿಂಗ ಪವಾರ.ತಾಪಂ ಇಓ ಬಿ.ಆರ್.ಬಿರಾದಾರ. ಪುರಸಭೆ ಮುಖ್ಯಾಧಿಕಾರಿ ಮೋಹನ ಜಾಧವ. ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿ ಹಿರೇಗೌಡರ. ಬಿಇಓ ಬಿ.ಎಸ್.ಸಾವಳಗಿ. ತಾಲೂಕಾ ಆರೋಗ್ಯಾಧಿಕಾರಿ ಸತೀಶ ತಿವಾರಿ. ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಉಮೇಶ ಲಮಾಣಿ. ಕೃಷಿ ಅಧಿಕಾರಿ ಸುರೇಶ ಭಾವಿಕಟ್ಟಿ. ಮಹೇಶ ಜೋಶಿ. ಪಶುವೈದ್ಯಾಧಿಕಾರಿ ಡಿ.ಬಿ. ರಾಠೋಡ. ಜಿಲ್ಲಾ ಹಾಗೂ ತಾಲೂಕ ಮಟ್ಟದ ಅಧಿಕಾರಿಗಳು ಇದ್ದರು. ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತ ಅಧ್ಯಕ್ಷರು ಸದಸ್ಯರು ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತರು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು. ತಾಳಿಕೋಟೆ ಸರ್ಕಾರಿ ಪ್ರೌಢಶಾಲೆ ವಿದ್ಯಾರ್ಥಿನಿಯರು ನಾಡಗೀತೆ ಹಾಡಿದರು. ಪಿಡಿಓ ಬಿ.ಎಮ್. ಸಾಗರ ಸ್ವಾಗತಿಸಿದರು. ಶಿಕ್ಷಕರಾದ ಅನಿಲಕುಮಾರ ಇರಾಜ್ ರಾಜು ವಿಜಾಪೂರ ಹಾಗೂ ಬಿ.ಹೀರೆಹೋಳಿ ನಿರೂಪಿಸಿದರು.

# ಎಲ್ಲ ತಾಲ್ಲೂಕು ರೈಲ್ವೆ ನಿಲ್ದಾಣ ಅಭಿವೃದ್ಧಿಗೆ ಕ್ರಮ: ಸೋಮಣ್ಣ

ಉಳಿದ ಎಲ್ಲ ಭೂಮಿ ಸ್ವಾಧೀನವಾಗಿದೆ ಎಂದು ಅವರು ತಿಳಿಸಿದರು.ರಾಜ್ಯ ಸೇರಿದಂತೆ ದೇಶಾದ್ಯಂತ ನೆನೆಗುದಿಗೆ ಬಿದ್ದಿರುವ ರೈಲ್ವೆ ಕೆಳಸೇತುವೆಗಳು ಹಾಗೂ ಮೇಲ್ಸೇತುವೆ ಕಾಮಗಾರಿಗಳ ಚುರುಕಿಗೆ ಕ್ರಮ ಕೈಗೊಳ್ಳಲಾಗುವುದು. ಈ ಸಂಬಂಧ ಬಜೆಟ್‌ನಲ್ಲೂ ಪ್ರಸ್ತಾಪ ಮಾಡಲು ರೈಲ್ವೆ ಸಚಿವರೊಂದಿಗೆ ಚರ್ಚಿಸಲಾಗುವುದು ಎಂದು ಅವರು ಹೇಳಿದರು. ದಕ್ಷಿಣ ಏಷ್ಯಾದಲ್ಲೇ ಡಾಬಸ್‌ಪೇಟೆ ಮತ್ತು ವಸಂತನರಸಾಪುರ ಕೈಗಾರಿಕಾ ಕಾರಿಡಾರ್ ಗಮನಾರ್ಹವಾಗಿದೆ. ಇಲ್ಲಿನ ವಿಮಾನ ನಿಲ್ದಾಣ ಸ್ಥಾಪಿಸುವ ಪ್ರಸ್ತಾವನೆಯೂ ಇದೆ. ಆದರೆ ಈ ನಡುವೆ ತಮಿಳುನಾಡಿನವರು ಹೊಸೂರಿನಲ್ಲಿ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಚಾಲನೆ ನೀಡಿದ್ದಾರೆ ಎಂದರು.

ಜಲಜೀವನ್ ಮಿಷನ್ ಯೋಜನೆಯಡಿ ಮನೆ ಮನೆಗೆ ನೀರು ಒದಗಿಸುವ ಕಾರ್ಯಕ್ರಮ, ಉದ್ಯೋಗ ಖಾತ್ರಿ ಸೇರಿದಂತೆ ಜಲಶಕ್ತಿ ಯೋಜನೆಗೆ ಸಂಬಂಧಿಸಿದ ಕಾರ್ಯಕ್ರಮಗಳ ಕುರಿತು ಮಂಗಳವಾರ ಮತ್ತು ಬುಧವಾರ ಕಂದಾಯ ಇಲಾಖೆ ಅಧಿಕಾರಿಗಳ ಸಭೆ ಕರೆದಿದ್ದು, ಈ ಸಭೆಯಲ್ಲಿ ಪ್ರಗತಿ ಪರಿಶೀಲನೆ ನಡೆಸಲಾಗುವುದು ಎಂದರು.

ವಂದೇಭಾರತ್ ನಿಲುಗಡೆಗೆ ಮನವಿ

ಬೆಂಗಳೂರಿನಿಂದ ಹುಬ್ಬಳಿಗೆ ತೆರಳುವ ವಂದೇಭಾರತ್ ರೈಲನ್ನು ತುಮಕೂರು ರೈಲ್ವೆ ನಿಲ್ದಾಣದಲ್ಲಿ ನಿಲುಗಡೆಗೆ ಅವಕಾಶ ನೀಡುವಂತೆ ಪ್ರಧಾನಿ ನರೇಂದ್ರ ಮೋದಿಯವರಿಗೆ ಮನವಿ ಮಾಡಲಾಗುವುದು ಎಂದು ಸಚಿವ ಸೋಮಣ್ಣ ಹೇಳಿದರು.ಹಾಗೆಯೇ ಚನ್ನೈನಿಂದ ಶಿವಮೊಗ್ಗಕ್ಕೆ ವಿಶೇಷ ರೈಲು ಓಡಿಸುವ ಸಂಬಂಧವೂ ಚಿಂತನೆ ನಡೆದಿದೆ ಎಂದು ಅವರು ತಿಳಿಸಿದರು.ಮುಂದಿನ 15 ದಿನದೊಳಗೆ ಕೇಂದ್ರ ರೈಲ್ವೆ ಸಚಿವರೊಂದಿಗೆ ಚರ್ಚಿಸಿ ರಾಜಧಾನಿ ಬೆಂಗಳೂರಿಗೆ ದೊರೆಯುವ ರೈಲ್ವ ಸೌಲಭ್ಯಗಳನ್ನು ತುಮಕೂರಿಗೂ ಒದಗಿಸಿಕೊಡುವ ಚಿಂತನೆ ತಮ್ಮದಾಗಿದೆ ಎಂದರು.

ಬಜೆಟ್‌ನಲ್ಲಿ ಹೊಸ ಯೋಜನೆ

ನೆಲಮಂಗಲ ಮಾದಾವರದಿಂದ ತುಮಕೂರಿನ ಸಿರಾ ಗೇಟ್‌ವರೆಗೆ 46 ಕಿ.ಮೀ. ಆಗಲಿದ್ದು, ಇಲ್ಲಿಗೆ ಕ್ರಮಿಸಬೇಕಾದರೆ ಸುಮಾರು ಒಂದೂವರೆ ಗಂಟೆ ಬೇಕಾಗುತ್ತದೆ. ಹಾಗಾಗಿ ಮಾದಾವರದಿಂದ ಸಿರಾ ಗೇಟ್‌ವರೆಗಿನ ಹೆದ್ದಾರಿಗೆ ಹೊಸ ರೂಪ ಕೊಡುವ ಚಿಂತನೆಯಿದ್ದು, ಈ ಕಾರ್ಯಕ್ರಮ ಬಜೆಟ್‌ನಲ್ಲಿ ಘೋಷಣೆಯಾಗಲಿದೆ ಎಂಬ ಸುಳಿವನ್ನು ಸಚಿವ ಸೋಮಣ್ಣ ನೀಡಿದರು.ದೆಹಲಿಯ ಕಚೇರಿಯಲ್ಲಿ ಸೋಮವಾರದಿಂದ ಗುರುವಾರದವರೆಗೆ ಇಲಾಖೆಯ ಕೆಲಸ ಮಾಡುವಂತೆ ಪ್ರಧಾನಿ ನರೇಂದ್ರ ಮೋದಿಯವರು ಸೂಚನೆ ನೀಡಿದ್ದಾರೆ. ಉಳಿದಂತೆ ಶುಕ್ರವಾರ, ಶನಿವಾರ ಹಾಗೂ ಭಾನುವಾರ ಕ್ಷೇತ್ರದ ಕೆಲಸ ಕಾರ್ಯಗಳನ್ನು ಮಾಡುವಂತೆ ತಿಳಿಸಿದ್ದಾರೆ. ಅದರಂತೆ ಕಾರ್ಯಕ್ರಮಗಳನ್ನು ರೂಪಿಸಿಕೊಳ್ಳುತ್ತಿರುವುದಾಗಿ ಅವರು ಹೇಳಿದರು.

ಕೇಂದ್ರ-ರಾಜ್ಯ ಒಂದೇ ನಾಣ್ಯದ 2 ಮುಖಗಳು

ರೈಲ್ವೆ ಹಾಗೂ ಜಲಶಕ್ತಿ ಯೋಜನೆಗೆ ಸಂಬಂಧಿಸಿದಂತೆ ರಾಜ್ಯದಲ್ಲಿ ಹಲವು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಬೇಕಾಗಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಒಂದೇ ನಾಣ್ಯದ ಎರಡು ಮುಖಗಳಂತೆ ಕೆಲಸ ಮಾಡಬೇಕಾಗಿದ್ದು, ಈ ಸಂಬಂಧ ಈಗಾಗಲೇ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿದ್ದೇನೆ. ಅವರು ಸಹ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದರು.ಇದು ನನಗೆ ಕ್ಷೇತ್ರದ ಜನತೆ ಕೊಟ್ಟಿರುವ ಬಳುವಳಿ. ನಾನು ಸಂಸದನಂತೆ ಕೆಲಸ ಮಾಡುವುದಿಲ್ಲ, ಒಬ್ಬ ಕಾರ್ಪೊರೇಟರ್‌ನಂತೆ ಬೀದಿ ಬೀದಿ ಸುತ್ತಿ ಕೆಲಸ ಮಾಡುವ ಇಚ್ಛೆ ಹೊಂದಿದ್ದೇನೆ. ಹಾಗೆಯೇ ಕೆಲಸ ಮಾಡುತ್ತೇನೆ. ಈಗ ಚುನಾವಣೆ ಮುಗಿದಿದೆ, ಇನ್ನು ಮುಂದೆ ಅಭಿವೃದ್ಧಿ ಕಾರ್ಯಗಳು ಸದ್ದು ಮಾಡಬೇಕಾಗಿದೆ. ಚುನಾವಣೆ ಬಂದಾಗ ಮಾತ್ರ ರಾಜಕೀಯ ಮಾಡೋಣ ಎಂದರು.

# ನೂತನ ಜಿಲ್ಲಾಧಿಕಾರಿಯಾಗಿ ನಿತೀಶ್ ಕೆ. ಅಧಿಕಾರ ಸ್ವೀಕಾರ



ರಾಯಚೂರು:-

ಜಿಲ್ಲೆಯ ನೂತನ ಜಿಲ್ಲಾಧಿಕಾರಿಯಾಗಿ ನಿತೀಶ್ ಕೆ. ಅವರು ಇಂದು ಅಧಿಕಾರ ಸ್ವೀಕರಿಸಿದರು. ನಿರ್ಗಮಿತ ಜಿಲ್ಲಾಧಿಕಾರಿ ಎಲ್.ಚಂದ್ರಶೇಖರ ನಾಯಕ ಅವರು ನೂತನ ಜಿಲ್ಲಾಧಿಕಾರಿಗೆ ಹೂಗುಚ್ಚ ನೀಡಿ ಬರಮಾಡಿಕೊಂಡರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ತುಕರಾಮ್ ಪಾಂಡ್ವೆ, ಅಪರ ಜಿಲ್ಲಾಧಿಕಾರಿಗಳಾದ ಡಾ.ಕೆ.ಆರ್.ದುರುಗೇಶ್ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳ ಕಚೇರಿಯ ಸಿಬ್ಬಂದಿಗಳು ಇದ್ದರು.

## ಒಲಿಂಪಿಕ್ಸ್: ಭಾರತಕ್ಕೆ ನೀರಜ್ ಸಾರಥಿ




ಜುಲೈ 26 ರಿಂದ ಪ್ರಾರಂಭವಾ ಗಲಿರುವ ಪ್ಯಾರಿಸ್ ಒಲಿಂಪಿ ಕ್ಸ್‌ನಲ್ಲಿ ಭಾರತ ದೇಶದ ಅಥ್ಲೇಟಿಕ್ಸ್ ತಂಡವನ್ನು ಹಾಲಿ ಚಾಂಪಿ ಯನ್ ನೀರಜ್ ಚೋಪ್ರಾ ಮುನ್ನ ಡೆಸಲಿದ್ದಾರೆ. ಭರತದಿಂದ 17 ಪುರುಷ ಮತ್ತು 11 ಮಹಿಳಾ ಆಥ್ಲೇಟ್‌ಗಳು ಆಯ್ಕೆಯಾಗಿದ್ದು, 28 ಜನರ ಈ ತಂಡಕ್ಕೆ ನೀರಜ್ ನೇತೃತ್ವ ವಹಿಸಲಿದ್ದಾರೆ.

# ಜನಸ್ಪಂದನ ಕಾರ್ಯಕ್ರಮ ರದ್ದು, ಹೋರಟಗಾರ ಗಂಗಣ್ಣವರ ಆಕ್ರೋಶ




ಮೂಡಲಗಿ:-

ಪ್ರಭಾ ಸಕ್ಕರೆ ಕಾರ್ಖಾನೆ ಹತ್ತಿರ ಬಸವೇಶ್ವರ ಸಭಾ ಭವನದಲ್ಲಿ ಶುಕ್ರವಾರ ಅವಳಿ ತಾಲೂಕಿನ ಸಮಸ್ಯೆ ಬಗ್ಗೆ ಜನಸ್ಪಂದನ ಜಿಲ್ಲಾಡಳಿತ ವತಿಯಿಂದ ನಡೆಯಬೇಕಾದ ಕಾರ್ಯಕ್ರಮ ರದ್ದು. ಮೂಡಲಗಿ ಮತ್ತು ಗೋಕಾ-ಕ ತಾಲೂಕ "ಜನಸ್ಪಂದನಾ" ಕಾರ್ಯಕ್ರಮ ಜಿಲ್ಲಾಧಿಕಾರಿ ಸಿಇಓ. ಎಸ್ ಪಿ. ಈ ಕಾರ್ಯಕ್ರಮಕ್ಕೆ ಬರದೇ ಇರುವುದರಿಂದ ಡಿಸಿ ಅವರ ಅಧ್ಯಕ್ಷತೆಯಲ್ಲಿ ನೆರವೇರಬೇಕಿದ್ದ ಕಾರ್ಯಕ್ರಮ, ಬೈಲಹೊಂಗಲ ಎಸಿ ಅವರ ಅಧ್ಯಕ್ಷತೆಯಲ್ಲಿ ಪ್ರಾರಂಭಗೊಂಡಾಗ ಸಾಮಾಜಿಕ ಹೋರಾಟಗಾರ ಗುರುನಾಥ ಗಂಗಣ್ಣವರ, ಪ್ರಕಾಶ ಬಾಗೋಜಿ ಮತ್ತು ಇನ್ನು ಅನೇಕರು ಈ ಕಾರ್ಯಕ್ರಮವನ್ನು ತಡೆದರು. ಎಸಿ ಯವರ ಅಧ್ಯಕ್ಷತೆಯಲ್ಲಿ ಮತ್ತು ತಾಲೂಕಾಡಳಿತ ನೇತೃತ್ವದಲ್ಲಿ ಈ ಕಾರ್ಯಕ್ರಮ ನೆರವೇರುವುದು ಸೂಕ್ತ ಅಲ್ಲ. ನಿಮ್ಮಿಂದ ಸಾರ್ವಜನಿಕ ಸಮಸ್ಯೆಗಳನ್ನು ಬಗೆಹರಿಸದ ಸಮಯದಲ್ಲಿ ಜಿಲ್ಲಾ ಆಡಳಿತ ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ನಿಮ್ಮ ಮೇಲೆ ತಾಲೂಕ ಆಡಳಿತ ಮೇಲೆ ನಮಗೆ ಯಾವುದೇ ನಂಬಿಕೆ ವಿಶ್ವಾಸ ಇಲ್ಲ ನೀವು ಈ ಕಾರ್ಯಕ್ರಮ ನಡೆಸುವುದು ಬೇಡ ಎಂದಾಗ ಬೈಲಹೊಂಗಲ ಎಸಿ ಅವರು ಸಾಮಾಜಿಕ ಕಾರ್ಯಕ್ರಮ ತಡೆದವರ ಎದುರು ನಿಮಗೆ ಇಷ್ಟ ಇಲ್ಲದಿದ್ದರೆ ಹೋಗಿ ಎಂಬ ಉಡಾಫೆ ಉತ್ತರವನ್ನು ನೀಡಿದರು. ಅದ-ಕ್ಕೆ ಪ್ರತಿಯಾಗಿ ಗಂಗಣ್ಣವರ ಅವರು ನಾನು ನಿಮ್ಮ ಮನೆಗೆ ಬಂದಿಲ್ಲ ಜಿಲ್ಲಾಧಿಕಾರಿಯವರಿಗೆ ದೂರು ನೀಡಲು ಬಂದಿದ್ದೇನೆ ಎಂದು ಹೇಳಿದಾಗ ಕೆಲ ಕಾಲ ವೇದಿಕೆಯ ಮೇಲೆ ಮೂಡಲಗಿ ಮತ್ತು ಗೋಕಾಕ ತಾಲೂಕಿನ ಅಧಿಕಾರಿಗಳು ಹಾಗೂ ಹೋರಾಟಗಾರರ ಮಧ್ಯೆ ವಾಗ್ವಾದ ನಡೆಯಿತು. ನಂತರ ಡಿಸಿ ಅವರೊಂದಿಗೆ ಮಾತನಾಡಿದ ಎಸಿ ಅವರು ಕಾರ್ಯಕ್ರಮವನ್ನು ಮುಂದೂಡಿ ವೇದಿಕೆಯಿಂದ ಎಲ್ಲರೂ ನಿರ್ಗಮಿಸಿದರು. ಜನರ ಸಮಸ್ಯೆಯನ್ನು ಆಲಿಸಬೇಕಿದ್ದ ಜಿಲ್ಲಾಡಳಿತದ ಅಧಿಕಾರಿಗಳೇ ಕಾರ್ಯಕ್ರಮಕ್ಕೆ ಗೈರಾಗಿರುವುದರಿಂದ ಸಮಸ್ಯೆಯನ್ನು ಹೇಳಿಕೊಳ್ಳಲು ಬಂದಿದ್ದ ಎರಡು ತಾಲೂಕಿನ ಜನತೆ ಅಧಿಕಾರಿಗಳ ವಿರುದ್ಧ ತಮ್ಮ ಆಕ್ರೋಶವನ್ನು ವ್ಯಕ್ತಪಡಿಸಿದರು. ಸರ್ಕಾರದ ನಿಯಮವನ್ನ ಪಾಲಿಸಲು ಕಾಟಾಚಾರಕ್ಕೆ ಈ ಕಾರ್ಯಕ್ರಮವನ್ನು ಜಿಲ್ಲಾಡಳಿತ ಹಾಗೂ ತಾಲೂಕ ಆಡಳಿತಗಳು ಹಮ್ಮಿಕೊಂಡಿದ್ದವು. ನಿಜವಾಗಲೂ ಇವರಿಗೆ ಜನರ ಸಮಸ್ಯೆಯನ್ನು ಆಲಿಸುವುದು ಮತ್ತು ಪರಿಹರಿಸುವುದು ಇಷ್ಟವಿರಲಿಲ್ಲ. ಎಂದು ಸಾಮಾಜಿಕ ಹೋರಾಟಗಾರ ಗುರುನಾಥ್ ಗಂಗಣ್ಣವರ ಅಧಿಕಾರಿಗಳ ವಿರುದ್ಧ ತಮ್ಮ ಆಕ್ರೋಶವನ್ನು ವ್ಯಕ್ತಪಡಿಸಿದರು.

# ನಾಳೆ ಮೂಡಲಗಿ ಪಟ್ಟಣದಲ್ಲಿ ಕರೆಂಟ್ ವ್ಯತ್ಯಯ

ಮೂಡಲಗಿ:-

ಪಟ್ಟಣದ ತುರ್ತು ಕಾಮಗಾರಿ ಇರುವುದರಿಂದ ಸೋಮ ವಾರ ದಿನಾಂಕ-08-07-2024 ರಂದು 110ಕೆ ವಿ ಮೂಡ ಲಗಿ ವಿದ್ಯುತ್ ವಿತರಣಾ ಕೇಂದ್ರದಿಂದ ಸರಬರಾಜು ಇರುವುದಿಲ್ಲ. ಶಿವಬೋಧರಂಗನ ಮಠ,ಗಾಂಧಿ ಚೌಕ,ಕಲ್ಲೇಶ್ವರ ವೃತ್ತ, ದೇಶಪಾಂಡೆ ಪ್ಲಾಟ್, ಅಮನ ನಗರ,ದನದ ಪೇಟೆ, ಮಾರ್ಕೆಟ್ ರೋಡ, ವಿದ್ಯಾ ನಗರ,ಅಂಬೇಡ್ಕರ ನಗರ ಈ ಎಲ್ಲ ಪ್ರದೇಶಗಳಲ್ಲಿ ಮುಂಜಾನೆ 10 ಗಂಟೆಗೆಯಿಂದ,ಸಂಜೆ 05 ಗಂಟೆಯ ವರೆಗೆ ವಿದ್ಯುತ್/ಕರೆಂಟ್ ಇರುವುದಿಲ್ಲ ಸಾರ್ವಜನಿಕರು ಸಹಕರಿಸಬೇಕೆಂದು ಸಹಾಯಕ ಕಾರ್ಯ ನಿರ್ವಾಹಕ ಮೂಡಲಗಿ ಕೇಳಿಕೊಂಡಿದ್ದಾರೆ.

# ವಿದ್ಯಾರ್ಥಿಗಳು ಪರಿಸರ ಪ್ರೇಮಿಗಳಾಗಲಿ: ಶಾಸಕರಾದ ಹೆಚ್.ಆರ್.ಗವಿಯಪ್ಪ ಸಲಹೆ

ಹೊಸಪೇಟೆ:-

ಪರಿಸರ ಎನ್ನುವುದು ನಮಗೆ ಜೀವನವಿದ್ದಂತೆ, ಸುಂದರವಾದ ಪರಿಸರವನ್ನು ನಾವು ನಿರ್ಮಾಣ ಮಾಡಬೇಕಾಗಿದೆ. ವಿದ್ಯಾರ್ಥಿಗಳು ಪರಿಸರ ಪ್ರೇಮಿಗಳಾಗಬೇಕು ಎಂದು ಶಾಸಕರಾದ ಹೆಚ್.ಆರ್. ಗವಿಯಪ್ಪ ಅವರು ವಿದ್ಯಾರ್ಥಿಗಳಿಗೆ ಸಲಹೆ ಮಾಡಿದರು.

ಹೊಸಪೇಟೆಯ ವಿಜಯನಗರ ಪ್ರಾದೇಶಿಕ ಅರಣ್ಯ ವಿಭಾಗ, ಪ್ರಾದೇಶಿಕ ಅರಣ್ಯ ವಲಯ, ಸಾಮಾಜಿಕ ಅರಣ್ಯ ವಲಯ ಇವರ ಸಹಯೋಗದಲ್ಲಿ ಜುಲೈ 4ರಂದು ಜಂಬುನಾಥನಹಳ್ಳಿ ಗುಡ್ಡದ ಹತ್ತಿರ ಆಯೋಜಿಸಲಾಗಿದ್ದ ವನಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಬಳಿಕ ಅವರು ಮಾತನಾಡಿದರು.

ಪರಿಸರವನ್ನು ನಾವು ಹಾಳುಮಾಡದೇ ಅದನ್ನು ರಕ್ಷಣೆ ಮಾಡುವುದು ಪ್ರತಿಯೊಬ್ಬರ ಕರ್ತವ್ಯ. ಪರಿಸರದಿಂದ ನಮಗೆ ಉತ್ತಮವಾದ ಆಮ್ಲಜನಕ ದೊರೆಯುತ್ತದೆ. ಪರಿಸರ ಉಳಿದರೆ ಮಾತ್ರ ನಾವು ಬದುಕಲು ಸಾಧ್ಯ. ಎಲ್ಲರೂ ಒಗ್ಗಟ್ಟಾಗಿ ಉತ್ತಮವಾದ



ಪರಿಸರದ ವಾತಾವರಣವನ್ನು ನಿರ್ಮಿಸಬೇಕು. ವರ್ಷಕ್ಕೆ 5 ಗಿಡಗಳನ್ನಾದರು ನೆಡಬೇಕು ಎಂದು ಸಲಹೆ ನೀಡಿದರು.

ಬಳ್ಳಾರಿಯ ಸಾಮಾಜಿಕ ಅರಣ್ಯ ವಿ ಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ರವಿ.ಜೆ ಅವರು ಪ್ರಾಸ್ತಾವಿಕ ಮಾತನಾಡಿ, ತಾಯಿ ಹೆಸರಿನಲ್ಲಿ ಇಂದು ನಾವು ಗಿಡಗಳನ್ನು ನೆಟ್ಟಿದ್ದೇವೆ. ಸರ್ವಕಾಲಕ್ಕೂ ತಾಯಿಯೇ ಶ್ರೇಷ್ಠ. ತಾಯಿಯ ಹೆಸರಲ್ಲಿ ಗಿಡ ನೆಟ್ಟರೆ ಆ ಮರಗಳು ಸಮೃದ್ಧಿಯಾಗಿ ಬೆಳೆಯುತ್ತವೆ. ನಮ್ಮಲ್ಲಿ ವಿವಿಧ ಜಾತಿಯ ಅನೇಕ ಮರಗಳಿವೆ. ಅವುಗಳನ್ನು ನಾವು ಕಾಪಾಡಬೇಕಾಗಿದೆ. ಹೆಚ್ಚು ಹೆಚ್ಚು ಮರಗಳಿದ್ದರೆ ಪರಿಸರ ಸುಂದರವಾಗಿ ಕಾಣುತ್ತದೆ ಹಾಗೂ ಉತ್ತಮವಾದ ಗಾಳಿಯು ನಮಗೆ ಸಿಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಾಲಾ ವಿದ್ಯಾರ್ಥಿಗಳಾದ ಜೆಶ್ವಂತ್ ಹಾಗೂ ಗಾಯಿತ್ರಿ ತಮ್ಮ ಅನಿಸಿಕೆಗಳನ್ನು ಹೇಳಿದರು. ಸಮಾರಂಭದಲ್ಲಿ ಪರಿಸರಕ್ಕೆ ಸಂಬಂಧಿಸಿದಂತೆ ಚರ್ಚಿಸಲು ವಿದ್ಯಾರ್ಥಿಗಳಿಗೆ ಅವಕಾಶ ನೀಡಲಾಗಿತ್ತು. ಅನೇಕ ವಿದ್ಯಾರ್ಥಿಗಳು ಪರಿಸರಕ್ಕೆ ಸಂಬಂಧಿಸಿದ ಪ್ರಶ್ನೆಗಳನ್ನು ಅಧಿಕಾರಿಗಳಿಗೆ ಕೇಳಿ ಹೆಚ್ಚಿನ ಮಾಹಿತಿ ಪಡೆದುಕೊಂಡರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಶ್ರೀಹರಿ ಬಾಬು ಬಿ.ಎಲ್., ಪ್ರಾದೇಶಿಕ ಅರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಾದ ಅರ್ಸಲನ್, ಸಹಾಯಕ ಆಯುಕ್ತರಾದ ಮಹಮ್ಮದ್ ಅಲಿ ಅಕ್ರಮ ಷಾಹ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಮನೋಹರ, ನಗರಸಭೆ ಆಯುಕ್ತರಾದ ಈರಣ್ಣ, ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಚನ್ನಬಸಪ್ಪ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಾಳಾದ ರಾಜೇಶ್ ನಾಯ್ಕ್, ಹೊಸಪೇಟೆ ವಲಯ ಅರಣ್ಯಾಧಿಕಾರಿ ಭರತ್‌ರಾಜ್, ಸಾಮಾಜಿಕ ಅರಣ್ಯಾಧಿಕಾರಿ ನಾಗರಾಜ್.ಕೆ, ಅರಣ್ಯ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಗೂ ಸರಕಾರಿ ಪದವಿ ಪೂರ್ವ ಕಾಲೇಜು, ಅಂಬೇಡ್ಕರ್ ಶಾಲೆ ಮತ್ತು ಆದರ್ಶ ವಿದ್ಯಾಲಯದ ವಿದ್ಯಾರ್ಥಿಗಳು, ಶಿಕ್ಷಕರು, ಸಾರ್ವಜನಿಕರು ಇದ್ದರು.

# ತಾಳಿಕೋಟೆ: ಇಂದಿರಾ ಕ್ಯಾಂಟೀನ ಕಟ್ಟಡ ಕಾಮಗಾರಿ ಡಿಸಿಪರಿಶೀಲನೆ



ವಿಜಯಪುರ:-

ಪ್ರಗತಿಯಲ್ಲಿರುವ ಇಂದಿರಾ ಕ್ಯಾಂಟೀನ ಕಾಮಗಾರಿಗೆ ವೇಗ ನೀಡಿ ನಿಗದಿತ ಕಾಲಮಿತಿಯೊಳಗೆ ಕಾಮಗಾರಿ ಪೂರ್ಣಗೊಳಿಸುವಂತೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಶುಕ್ರವಾರ ತಾಳಿಕೋಟೆಗೆ ಭೇಟಿ ನೀಡಿದ ಜಿಲ್ಲಾಧಿಕಾರಿ, ಪಟ್ಟಣದ ಹುಣಸಗಿ ರಸ್ತೆಯಲ್ಲಿ ಹೊಸದಾಗಿ ನಿರ್ಮಾಣವಾಗುತ್ತಿರುವ ಇಂದಿರಾ ಕ್ಯಾಂಟೀನ್ ಕಟ್ಟಡದ ನಿರ್ಮಾಣ ಕಾಮಗಾರಿಯ ಪ್ರಗತಿ ಪರಿಶೀಲನೆ ನಡೆಸಿದರು. ಈ ಕಾಮಗಾರಿಯನ್ನು ಆದಷ್ಟು ಬೇಗ ಪೂರ್ಣಗೊಳಿಸಬೇಕು. ಕಟ್ಟಡವು ಗುಣಮಟ್ಟದಿಂದ ಕೂಡಿರುವಂತೆ ನೋಡಿಕೊಳ್ಳಬೇಕು. ಕ್ಯಾಂಟೀನ್ ಸುತ್ತ ಕಂಪೌಂಡ್ ನಿರ್ಮಿಸಿ, ಫ್ಲೋರಿಂಗ್ ಮಾಡಲು ತಾಳಿಕೋಟೆ ಮುಖ್ಯಾಧಿಕಾರಿಗಳಿಗೆ ಸೂಚನೆ ನೀಡಿದರು.

ಹಳೆಯ ಪುರಸಭೆಯ ಆವರಣದಲ್ಲಿನ ಗ್ರಂಥಾಲಯ ಕಟ್ಟಡವನ್ನು ಪರಿಶೀಲನೆ ನಡೆಸಿದ ಅವರು, ಈಗಿರುವ ಗ್ರಂಥಾಲಯದ ಪಕ್ಕದಲ್ಲಿರುವ ಖಾಲಿ ಜಾಗೆಯಲ್ಲಿ ಆಧುನಿಕ ಸೌಲಭ್ಯಯುಳ್ಳ ಅತ್ಯುತ್ತಮ ಸ್ಮಾರ್ಟ್ ಗ್ರಂಥಾಲಯ ನಿರ್ಮಾಣಕ್ಕಾಗಿ ನೀಲ ನಕ್ಷೆ ಸಿದ್ಧಪಡಿಸಿ ಪ್ರಸ್ತಾವನೆ ಸಲ್ಲಿಸುವಂತೆ ಮುಖ್ಯಾಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ರಿಷಿ ಆನಂದ, ಜಿಲ್ಲಾ ಪಂಚಾಯತಿಣಟಿಜಜ-ಜಿಟಿಜಜ ಮುಖ್ಯ ಯೋಜನಾಧಿಕಾರಿ ನಿಂಗಪ್ಪ ಗೋಠೆ, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಸಿ.ಬಿ ಕುಂಬಾರ, ತಾಳಿಕೋಟೆ ತಹಶೀಲ್ದಾರ ಪ್ರೇಮಸಿಂಗ್ ಪವಾರ, ಮುಖ್ಯಾಧಿಕಾರಿ ಮೋಹನ ಜಾಧವ, ಆರೋಗ್ಯ ನಿರೀಕ್ಷಕ ಶಿವಾನಂದ ಜುಮನಾಳ ಸೇರಿದಂತೆ ಜಿಲ್ಲಾ ಮಟ್ಟದ ಹಾಗೂ ತಾಲೂಕ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ರೇಷ್ಮೆ ಉತ್ಪಾದಕರ ಕಂಪನಿಯ ಮೇಲೆ ಆರೋಪ



ಕೋಲಾರ:-

ಕೋಲಾರ ರೇಷ್ಮೆ ಉತ್ಪಾದಕ ಕಂಪನಿಯ ಬೆಳವಣಿಗೆ ಸಹಿಸಲಾಗದೆ ತಮ್ಮ ವೈಯಕ್ತಿಕ ಹಿತಾಸಕ್ತಿಗಾಗಿ ನಡುಪಳ್ಳಿ ಕೃಷ್ಣಮೂರ್ತಿ ಕಂಪನಿ ಮೇಲೆ ಮಾಡಿರುವ ಆರೋಪ ಸತ್ಯಕ್ಕೆ ದೂರ ಎಂದು ಕಂಪನಿ ಅಧ್ಯಕ್ಷ ಬಳಗೆರೆ ಶಂಕರೇಗೌಡ ಸ್ಪಷ್ಟೀಕರಣ ನೀಡಿದ್ದಾರೆ. ನಗರದ ಪತ್ರಕರ್ತರ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಕಂಪನಿ ಮೇಲೆ ಮಾಡಿರುವ ಆರೋಪ ಅವರ ವೈಯಕ್ತಿಕ ವಿಚಾರ. ಕಂಪನಿ ಕಡೆಯಿಂದ ತಮಗೆ ಯಾವುದೇ ಲಾಭವಿಲ್ಲದ ಕಾರಣ ಇಂತಹ ಆರೋಪಗಳನ್ನು ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಅವರೇ ಹೇಳಿರುವ ಹಾಗೆ ಪ್ರತಿ ತಿಂಗಳು ಆಡಳಿತ ಮಂಡಳಿಯ ಸಭೆ ನಡೆಸಿ ಸಭೆಯಲ್ಲಿ ನಿರ್ದೇಶಕರ ಸಮ್ಮುಖದಲ್ಲಿ ಕಂಪನಿಯ ಲೆಕ್ಕಪತ್ರಗಳನ್ನು ಮಂಡಿಸಿ ಖರ್ಚು ವೆಚ್ಚಗಳ ಬಗ್ಗೆ ಮಾಹಿತಿ ನೀಡಿ ನಿರ್ದೇಶಕರಿಂದ ಸಹಿ ಪಡೆಯಲಾಗುತ್ತಿದೆ ಎಂದರು. ಇಲಾಖೆ ಮಾರ್ಗದರ್ಶನದಂತೆ ಲೆಕ್ಕಪರಿಶೋಧಕರ ಸೂಚನೆಯಂತೆ ನಿರ್ದೇಶಕರ ಮಂಡಳಿ ಮತ್ತು ಸರ್ವ ಸದಸ್ಯರ ಸಭೆಗಳನ್ನು ನಡೆಸಲಾಗಿದೆ ಎಂದು ವಿವರಿಸಿದರು.

ಹಣದ ಆರೋಪ ಮಾಡಿರುವ ಬಗ್ಗೆ 1284500 ರೂ ಅನುದಾನ ಬಿಡುಗಡೆಯಾಗಿರುವುದು ನಿಜ. ಅದರಲ್ಲಿ ಸರ್ಕಾರದ ಮಾರ್ಗದರ್ಶನದಂತೆ ಎರಡು ವರ್ಷಗಳ ಸಿಬ್ಬಂದಿ ವೇತನ (ಮೇ 2023ರವರೆಗೆ) 852000 ರೂ ನೀಡಲಾಗಿದ್ದು, ಉಳಿಕೆ 4,5 ಲಕ್ಷ ರೂ ಅನುದಾನ ಸುತ್ತು ನಿಧಿಯಾಗಿದ್ದು, ಷೇರು ಹಣ 10 ಲಕ್ಷ ಮೂಲ ಬಂಡವಾಳದಲ್ಲಿ ಸಂಸ್ಥೆಯ ಕಾರ್ಯಚಟುವಟಿಕೆಯಲ್ಲಿ ತೊಡಗಿಸಿಕೊಂಡು ಪ್ರತಿವರ್ಷ ಹಂತಹಂತವಾಗಿ ಲಾಭದಾಯಕದತ್ತ ಹೆಜ್ಜೆ ಹಾಕುತ್ತಿದೆ. ಜಿಲ್ಲೆಯಲ್ಲಿ ಮಾದರಿ ಸಂಸ್ಥೆಯಾಗಿ ರೇಷ್ಮೆ ಇಲಾಖೆಯಲ್ಲಿ ಮಾದರಿಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದರು.

ಸಂಸ್ಥೆಯಲ್ಲಿ ಟ್ರ್ಯಾಕ್ಟರ್ ಖರೀದಿ ಮಾಡಲಾಗಿದ್ದು, ಆರೋಪ ಮಾಡಿರುವ ಕೃಷ್ಣಮೂರ್ತಿಯವರೇ 6 ತಿಂಗಳು ಬಳಕೆ ಮಾಡಿ ಅದನ್ನು ನಿರ್ವಹಿಸಲಾಗದೆ ಕಂಪನಿಗೆ ವಾಪಸ್ ನೀಡಿರುತ್ತಾರೆ, ತದನಂತರ ಯಾರು ಸಹ ಆಸಕ್ತಿ ವಹಿಸದ ಕಾರಣ ನಿರ್ದೇಶಕ ಮಂಡಳಿ ತೀರ್ಮಾನದಂತೆ ಅಧ್ಯಕ್ಷರ ಸುಪರ್ದಿಗೆ ನೀಡಿ 30,000 ಆದಾಯವನ್ನು ಸಂಸ್ಥೆಗೆ ನೀಡಿ ಜನವರಿಯಲ್ಲಿ ನಿರ್ದೇಶಕ ನಂಜೇಗೌಡರಿಗೆ ನೀಡಲಾಯಿತು. ಚಾಲಕರ ಕೊರತೆಯಿಂದ ಹಾಗೂ ರೇಷ್ಮೆ ಬೆಳೆಗಾರರು ಉಪಯೋಗಿಸಿಕೊಳ್ಳುವಂತೆ ನಿರ್ದೇಶಕರ ಮಂಡಳಿ ತಿಳಿಸಲಾಗಿರುತ್ತದೆ. ಟ್ರಾಕ್ಟರ್ ಕಂಪನಿಯ ಚಿರಾಸ್ತಿಯಾಗಿದ್ದು, ಅದನ್ನು ಯಾವುದೇ ರೀತಿಯಲ್ಲಿ ದುರುಪಯೋಗಪಡಿಸಿಕೊಂಡಿಲ್ಲ ಎಂದು ಹೇಳಿದರು. ಕೋಲಾರ ರೇಷ್ಮೆ ಉತ್ಪಾದಕ ಕಂಪನಿಗೆ ರಾಜ್ಯಾದ್ಯಂತ ಹಾಗೂ ಅಂತರರಾಜ್ಯ ಕಂಪನಿಗಳು ನಿರಂತರವಾಗಿ ಬೇಟಿ ನೀಡಿ ಸಂಸ್ಥೆಯ ಬಗ್ಗೆ ಪ್ರಶಂಸೆ ನೀಡಿದ್ದಾರೆ. ಇಲಾಖಾ ಮಟ್ಟದ ಉನ್ನತ ಅಧಿಕಾರಿಗಳು ಸಹ ತನಿಖೆ ನಡೆಸಿ ಕೋಲಾರ ರೇಷ್ಮೆ ಉತ್ಪಾದಕ ಕಂಪನಿಯು ಮಾದರಿಯಾಗಿದೆ ಎಂದು ಪ್ರಶಂಸಿಸಿದ್ದಾರೆ ಇದನ್ನು ಸಹಿಸಲಾಗದ ಕೃಷ್ಣಮೂತಿ ಕಂಪನಿಯ ಮೇಲೆ ವೃಥಾ ಆರೋಪ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

# ಲೋಕ ಅದಾಲತ್ : ಪೊಲೀಸ್ ಇಲಾಖೆಯ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಿದ್ಧತಾ ಸಭೆ

ಹೊಸಪೇಟೆ (ವಿಜಯನಗರ):-

ಜುಲೈ 13ರಂದು ನಿಗದಿಯಾದ ರಾಷ್ಟ್ರೀಯ ಲೋಕ ಅದಾಲತ್ ಹಿನ್ನೆಲೆಯಲ್ಲಿ ವಿಜಯನಗರ ಜಿಲ್ಲೆಯ ಪೊಲೀಸ್ ಇಲಾಖೆಯ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಿದ್ಧತಾ ಸಭೆಯು ಜುಲೈ 3ರಂದು ನಡೆಯಿತು. ಹೊಸಪೇಟೆ ತಾಲೂಕು ನ್ಯಾಯಾಲಯದ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ 3ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಅಬ್ದುಲ್ ರಹೀಮಾನ್ ಎ.ನಂದಗಡಿ ಅವರು ಮಾತನಾಡಿ, ಸಮಾಜದಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡುವಲ್ಲಿ ಪೊಲೀಸ್ ಇಲಾಖೆಯ ಪಾತ್ರ ಅತ್ಯಂತ ಪ್ರಮುಖವಾಗಿದೆ. ಆ ನಂತರದಲ್ಲಿ ನ್ಯಾಯಾಂಗ ಇಲಾಖೆಯ ಪಾತ್ರ ಇರುತ್ತದೆ. ಹಾಗಾಗಿ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಯು ಜವಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು. ಲೋಕ ಅದಾಲತ್‌ನಲ್ಲಿ ಪೊಲೀಸ್ ಇಲಾಖೆಯ ಪ್ರಕರಣಗಳು ಸಹ ಇತ್ಯರ್ಥವಾಗಬೇಕು. ಪೊಲೀಸ್ ಇಲಾಖೆಗೆ ಸಂಬಂಧಿಸಿದ ಪ್ರಕರಣಗಳು ಇಳಿಮುಖವಾಗಲು ಪೊಲೀಸ್ ಇಲಾಖೆಯ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿಯ ಸಹಕಾರ ಮತ್ತು ಸಮನ್ವಯ ಅಗತ್ಯವಾಗಿದೆ ಎಂದು ಅವರು ಸಲಹೆ ಮಾಡಿದರು.



**ಕಾರ್ಯವೈಖರಿಗೆ ಮೆಚ್ಚುಗೆ:** ವಿಜಯನಗರ ಜಿಲ್ಲೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ನೇತೃತ್ವದಲ್ಲಿ ಜಿಲ್ಲೆಯ ಪೊಲೀಸ್ ಇಲಾಖೆಯು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವುದು ಹೆಮ್ಮೆಯ ಹಾಗೂ ಅಭಿನಂದನಾರ್ಹ ಸಂಗತಿ ಎಂದು ಶ್ರೀಹರಿ ಬಾಬು ಅವರ ಕಾರ್ಯವೈಖರಿಯ ಬಗ್ಗೆ ನ್ಯಾಯಾಧೀಶರು ಮೆಚ್ಚುಗೆ ವ್ಯಕ್ತಪಡಿಸಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಶ್ರೀಹರಿ ಬಾಬು ಬಿ.ಎಲ್. ಅವರು ಮಾತನಾಡಿ, ಲೋಕ ಅದಾಲತ್‌ನಲ್ಲಿ ಗೌರವಾನ್ವಿತ ನ್ಯಾಯಾಧೀಶರ ಸೂಚನೆಗಳನ್ನು ಪಾಲಿಸಿ, ಬಾಕಿ ಉಳಿದ ಪೊಲೀಸ್ ಪ್ರಕರಣಗಳನ್ನು ಇತ್ಯರ್ಥಪಡಿಸುವಲ್ಲಿ ಶ್ರಮವಹಿಸಲಾಗುವುದು. ಕಾನೂನು ಸುವ್ಯವಸ್ಥೆಯನ್ನು ಅಚ್ಚುಕಟ್ಟಾಗಿ ಕಾಪಾಡುವಲ್ಲಿ ಇಡೀ ರಾಜ್ಯದಲ್ಲಿಯೇ ವಿಜಯನಗರ ಜಿಲ್ಲೆಯು 4ನೇ ಸ್ಥಾನದಲ್ಲಿದೆ ಎಂದು ತಿಳಿಸಿದರು. ಪ್ರಧಾನ ಸಿವಿಲ್ ಹಾಗೂ ಜೆ.ಎಂ.ಎಫ್.ಸಿ ನ್ಯಾಯಾಲಯದ ನ್ಯಾಯಾಧೀಶರು ಹಾಗೂ ತಾಲೂಕು ಕಾನೂನು ಸೇವಾ ಸಮಿತಿಯ ಸದಸ್ಯ ಕಾರ್ಯದರ್ಶಿಗಳಾದ ಪ್ರಶಾಂತ ನಾಗಲಾಪುರ ಅವರು ಮಾತನಾಡಿದರು.

ಗೌರವಾನ್ವಿತ ಪ್ರಧಾನ ಹಿರಿಯ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಧೀಶರಾದ ಹೇಮಲತಾ ಬಿ.ಹುಲ್ಲೂರು, ಗೌರವಾನ್ವಿತ ಅಪರ ಹಿರಿಯ ಸಿವಿಲ್ ಹಾಗೂ ಜೆ.ಎಂ.ಎಫ್.ಸಿ ನ್ಯಾಯಾಧೀಶರಾದ ರಮೇಶ್ ಬಾಬು ಬಿ.ಎನ್., ಗೌರವಾನ್ವಿತ ಪ್ರಧಾನ ಸಿವಿಲ್ ಹಾಗೂ ಗೌರವಾನ್ವಿತ ಅಪರ ಸಿವಿಲ್ ಹಾಗೂ ಜೆ.ಎಂ.ಎಫ್ ನ್ಯಾಯಾಧೀಶರಾದ ಅಶೋಕ ಆರ್.ಎಚ್, ಗೌರವಾನ್ವಿತ 2ನೇ ಅಪರ ಸಿವಿಲ್ ಹಾಗೂ ಜೆ.ಎಂ.ಎಫ್.ಸಿ ನ್ಯಾಯಾಧೀಶರಾದ ಸಂಜೀವಕುಮಾರ.ಜಿ ಮತ್ತು 3ನೇ ಅಪರ ಸಿವಿಲ್ ಹಾಗೂ ಜೆ.ಎಂ.ಎಫ್.ಸಿ ನ್ಯಾಯಾಧೀಶರಾದ ಚೈತ್ರ.ಜೆ, ಸಹಾಯಕ ಅಭಿಯೋಜಕ ರೇವಣಸಿದ್ದಪ್ಪ ಹಾಗೂ ಜಿಲ್ಲೆಯ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಸಲಿಮ್ ಪಾಷ ಮತ್ತು ಜಿಲ್ಲೆಯ ಎಲ್ಲಾ ಪೊಲೀಸ್ ಅಧಿಕಾರಿಗಳು ಮತ್ತು ತಾಲೂಕು ಕಾನೂನು ಸೇವಾ ಸಮಿತಿಯ ಸಹಾಯಕ ಎಸ್.ಬಿ.ಕಮತಗಿ ಉಪಸ್ಥಿತರಿದ್ದರು.

# ವೈದ್ಯಕೀಯ ಸೇವೆಗೆ ಸೌಲಭ್ಯ ಕೊರತೆಯ ತಾಂಬಾ ಸರಕಾರಿ ಆಸ್ಪತ್ರೆ

ಇಂಡಿ:-

ತಾಲೂಕಿನ ತಾಂಬಾ ಗ್ರಾಮದ ಸರಕಾರಿ ಆಸ್ಪತ್ರೆ ಉತ್ತಮವಾದ ಕಟ್ಟಡ ಹೊಂದಿದೆ. ಸರಕಾರ ಲಕ್ಷಾಂತರ ರೂ ಖರ್ಚು ಮಾಡಿ ಜನರಿಗೆ ಆರೋಗ್ಯ ಸಿಗಲೆಂದು ಖರ್ಚು ಮಾಡಿದೆ. ದುಡಿಯುವ ವರ್ಗ ಇದೆ. ಸಿಬ್ಬಂದಿ ಇದೆ. ವೈದ್ಯರಿದ್ದಾರೆ. ಕಳೆದ ಒಂದು ವರ್ಷದಿಂದ ಸೌಲಭ್ಯದ ಕೊರತೆಯಿಂದ ಧೂಳು ತಿನ್ನುತ್ತಿದೆ. ಇಲ್ಲಿ ಎರಡು ವೈದ್ಯರ ಹುದ್ದೆ ಮಂಜುರಾತಿ ಇದೆ. ಒಂದು ಹುದ್ದೆ ಎಂ.ಬಿ.ಬಿ.ಎಸ್ ಮತ್ತೊಂದು ಬಿ.ಎ.ಎಂ.ಎಸ್. ತಾಂಬಾ ಗ್ರಾಮ ಇಂಡಿ ತಾಲೂಕಿನ ಅತ್ಯಂತ ದೊಡ್ಡ ಗ್ರಾಮ. ಇಲ್ಲಿ 39 ಗ್ರಾ.ಪಂ ಸದಸ್ಯರ ಗ್ರಾ.ಪಂ ಹೊಂದಿದೆ. ಇಲ್ಲಿ ಎಂ.ಬಿ.ಬಿಎಸ್ ವೈದ್ಯರಿದ್ದಾರೆ. ಅವರು ತಾಂಬಾದಲ್ಲಿಯೇ ಇರಲು ಮನೆಯ ವ್ಯವಸ್ಥೆ ಇದೆ. ವೈದ್ಯರು ಹಲವಾರು ಬಾರಿ ವಿನಂತಿಸಿಕೊಂಡರೂ ಸ್ವಚ್ಛತೆ ಮಾಡಿ ಕೊಡುತ್ತಿಲ್ಲ. ಹೀಗಾಗಿ ಅವರು ವಿಜಯಪುರಕ್ಕೆ ಹೋಗಿ ಬಂದು ಮಾಡುತ್ತಾರೆ. ರಾತ್ರಿ ಹೊತ್ತು ಆಸ್ಪತ್ರೆಯಲ್ಲಿ ಉಳಿದ ರೋಗಿಗಳ ಕಾರುಬಾರು. ಇಲ್ಲಿ ರೋಗಿಗಳಿಗೆ ತರಲು ಅಂಬ್ಯಲನ್ಸ ಸೇವೆ ಇತ್ತು. ಅದನ್ನು ಇಂಡಿ ತಾಲೂಕಿನ ಅಥರ್ಗಾ ಆರೋಗ್ಯ ಕೇಂದ್ರಕ್ಕೆ ಕಳುಹಿಸಿದ್ದಾರೆ. ಕಳೆದ ಅನೇಕ ದಿನಗಳಿಂದ ನಾಯಿ ಕಡಿದ ಪ್ರಕರಣಗಳು ಬಂದಿವೆ. ಆದರೆ



ಇಲ್ಲಿ ನಾಯಿ ಕಡಿದರೆ ಅದಕ್ಕೆ ಆಸ್ಪತ್ರೆಯಲ್ಲಿ ಔಷದವೇ ಇಲ್ಲ ಎಂದು ಹೇಳುತ್ತಾರೆ. ಸರಿಯಾದ ಗುಳಿಗೆಗಳಿಲ್ಲ. ಔಷದ ನೀಡುವ ಸಿಬ್ಬಂದಿಯಿಲ್ಲ. ಕೆಲಸ ಮಾಡುವ ಸಿಬ್ಬಂದಿ ಬರುವದೇ ಇಲ್ಲ.

ಕಳೆದ ವರ್ಷದ ಸಿಂದಗಿ ಉಪ ಚುನಾವಣೆಯಲ್ಲಿ ತಾಂಬಾ ಆಸ್ಪತ್ರೆ ಸುಧಾರಣೆಗಾಗಿ ಗ್ರಾಮಸ್ಥರು ಆಗಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ,ಗೋವಿಂದ ಕಾರಜೋಳ, ದೇವೆಗೌಡ,ಕುಮಾರಸ್ವಾಮಿ, ಸಿದ್ದರಾಮಯ್ಯ,ಯಡೆಯೂರಪ್ಪ ಸೇರಿದಂತೆ ಎಲ್ಲ ರಾಜಕೀಯ ಧುರೀಣರಿಗೆ ವಿನಂತಿಸಿದರು. ಆದರೂ ಉಪಚುನಾವಣೆ ಮುಗಿಯಿತು. ದವಾಖಾನೆ ಮಾತ್ರ ಪ್ರಗತಿ ಕಾಣಲಿಲ್ಲ. ರಾತ್ರಿ ಹೊತ್ತಿನಲ್ಲಿ ಹೆರಿಗೆಗೆ ತಾಂಬಾ ಮತ್ತು ಸುತ್ತಲಿನ ಗ್ರಾಮಸ್ಥರು ವಿಜಯಪೂರಕ್ಕೆ ಹೋಗುವದು ಒಂದೇ ದಾರಿ. ಶ್ರೀಮಂತರು ಹೇಗಾದರೂ ಮಾಡಬಹುದು.

# ಹಬೋಹಳ್ಳಿ : ನೀಟ್ ಅಕ್ರಮ ಎಸ್ ಎಫ್ ಐ ಪ್ರತಿಭಟನೆ

ಹಗರಿಬೊಮ್ಮನಹಳ್ಳಿ:-

ನೀಟ್ ಅಕ್ರಮ ಖಂಡಿಸಿ ಎಸ್ ಎಫ್ ಐ ವತಿಯಿಂದ ಗುರುವಾರ ಬೃಹತ್ ಪ್ರತಿಭಟನೆ ಮಾಡಿ ತಾಲೂಕು ಉಪ ತಹಶಿಲ್ದಾರರಾದ ಶಿವಕುಮಾರ್ ಅವರಿಗೆ ಮನವಿ ಪತ್ರ ನೀಡಲಾಯಿತು. ಎಸ್ ಎಫ್ ಐ ತಾಲೂಕು ಸಮತಿ ಅಧ್ಯಕ್ಷ ಜಯಸೂರ್ಯ ಮಾತನಾಡಿ ಕಳೆದ ಕೆಲವು ವಾರಗಳಿಂದ ನಡೆದ ಘಟನೆಗಳನ್ನು ಗಮನಿಸಾಗ ಮತ್ತೊಮ್ಮೆ ರಾಷ್ಟ್ರೀಯ ಪರೀಕ್ಷಾ ಪ್ರಾಧಿಕಾರ ರಾಷ್ಟ್ರ ಮಟ್ಟದ ಪರೀಕ್ಷೆಗಳನ್ನು ನಡೆಸಲು ಅಸಮರ್ಥತೆಯನ್ನು ಪ್ರದರ್ಶಿಸಿದೆ. ನೆಟ್ ಮರು ಪರೀಕ್ಷೆ, ನೀಟ್ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆ ರಾಷ್ಟ್ರಾದ್ಯಂತ ಸುದ್ದಿ ಮಾಡಿದೆ. ಜೂನ್ 4 ರಂದು ಘೋಷಿಸಲಾದ ನೀಟ್ ಪರೀಕ್ಷೆಯ ಫಲಿತಾಂಶಗಳು ಸರಿಯಾದ ಪಾರದರ್ಶಕತೆ ಇಲ್ಲದೆ ಮತ್ತು ಪೇಪರ್ ಸೋರಿಕೆಯಂತಹ ದೂರುಗಳಿಂದ ಲಕ್ಷಾಂತರ ವಿದ್ಯಾರ್ಥಿಗಳು ಭಾದಿತರಾಗಿದ್ದರು ಎಂದರು. ಎಸ್ ಎಫ್ ಐ ನಾ ಮುಖಂಡರಾದ ನಂದಿತ ಮಾತನಾಡಿ ಉನ್ನತ ಶಿಕ್ಷಣದಲ್ಲಿನ ಸಮಸ್ಯೆಗಳು ಅಷ್ಟೇ ಅಲ್ಲದೆ, ಶಾಲಾ ಶಿಕ್ಷಣದ ಸಮಸ್ಯೆಗಳನ್ನು ಪ್ರತ್ಯೇಕಿಸುವಂತಿಲ್ಲ. ಬಿಜೆಪಿ ನೇತೃತ್ವದ ಎನ್ ಡಿ ಎ ಅವಧಿಯಲ್ಲಿ ಶಿಕ್ಷಣಕ್ಕೆ ಸಂಭಂದಪಟ್ಟ ಇಲಾಖೆಗಳಿಗೆ ಬಜೆಟ್ ನಲ್ಲಿ ಹಣ ಕಡಿತ ಮಾಡಿರುವುದು, ಸರ್ಕಾರಿ ಶಾಲೆಗಳನ್ನು ಮುಚ್ಚುವುದು, ಶಿಕ್ಷಕರ ಕೊರತೆ, ವಿದ್ಯಾರ್ಥಿಗಳ ಒಟ್ಟು ದಾಖಲಾತಿಯಲ್ಲಿ ಕುಸಿದಿರುವುದನ್ನು ಕಾಣಬಹುದಾಗಿದೆ ಎಂದರು.. ಶಿಕ್ಷಣ ಮತ್ತು ಪ್ರಜಾಪ್ರಭುತ್ವದ ಮೇಲಿನ ನಿರಂತರ ದಾಳಿಯನ್ನು ವಿರೋಧಿಸಿ, .ಸಾರ್ವತ್ರಿಕ ಶಿಕ್ಷಣ ವ್ಯವಸ್ಥೆಯನ್ನು ಬಲಪಡಿಸಿ, ಸರ್ಕಾರಿ ಶಾಲೆಗಳನ್ನು ಮುಚ್ಚುವುದನ್ನು ನಿಲ್ಲಿಸಬೇಕು. ಎಂದು ಒತ್ತಾಯಿಸಿ ಸಾವಿರಾರು ವಿದ್ಯಾರ್ಥಿಗಳು ಹೋರಾಟದಲ್ಲಿ ಪಾಲ್ಗೊಂಡಿದ್ದರು ಸಂಘಟನೆಯ ಸದಸ್ಯರಾದ ದುರುಗೇಶ್ ಮಹೇಶ್ , ಜಗದೀಶ್,ಅಶೋಕ್ , ನಾಗರಾಜ್ , ನಂದಿತ , ಪುಷ್ಪವತಿ,ನಂದಿನಿ,ಸುಲ್ತಾನಾ ಬೇಗಂ , ದಿನೇಶ್, ಅಜಯ್, ಹುಲುಗಪ್ಪ ,ದುರುಗೇಶ್ , ಸೇರಿದಂತೆ ವಿದ್ಯಾನಿಕೇತನ ಪಿಯು ಕಾಲೇಜ್ , ನಂದಿ ಪಿಯು ಕಾಲೇಜ್ , ಗಂಭೀ ಪದವಿ ಪೂರ್ವ ಕಾಲೇಜ್ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಆಟೋ ರಿಕ್ಷಾ ಕನಿಷ್ಠ ಪ್ರಯಾಣದರ 30 ರೂ ನಿಗದಿಗೆ ಆಗ್ರಹ



ಕೋಲಾರ:-

ರಾಜ್ಯದಲ್ಲಿ ಪೆಟ್ರೋಲಿಯಂ ಉತ್ಪನ್ನಗಳಾದ ಪೆಟ್ರೋಲ್-ಡೀಸೆಲ್, ಎಲ್.ಪಿ.ಜಿ ಉತ್ಪನ್ನಗಳ ಬೆಲೆ ಏರಿಕೆ ವಿರುದ್ಧ ಹಾಗೂ ಅಗತ್ಯ ವಸ್ತುಗಲ ಬೆಲೆ ಏರಿಕೆ ವಿರುದ್ಧ ಪ್ರತಿಭಟನೆ ಹಾಗೂ ಆಟೋ ರಿಕ್ಷಾ ಕನಿಷ್ಟ ಪ್ರಯಾಣದರ 30 ರೂಗೆ ನಿಗಧಿಡಿಸಲು ಒತ್ತಾಯಿಸಿ ಹಾಗೂ ಕೋಲಾರ ನಗರ ವ್ಯಾಪ್ತಿಯಂತೆ 15 ಕಿ.ಮೀ ನಿಗಧಿಯನ್ನು ಕೆ.ಜಿ.ಎಫ್, ಮಾಲೂರು, ಮುಳಬಾಗಿಲುಗಳಿಗೆ ವಿಸ್ತರಿಸುವಂತೆ ಆಗ್ರಹಿಸಿ ಕೋಲಾರ ಜಿಲ್ಲೆ ತ್ರಿಚಕ್ರ ವಾಹನ ಚಾಲಕರ ಸಂಘದ ವತಿಯಿಂದ ಜಿಲ್ಲಾಧಿಕಾರಿ ಅಕ್ರಂಪಾಷರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ರಾಜ್ಯಾಧ್ಯಕ್ಷ ಕೆ.ವಿ.ಸುರೇಶ್‌ಕುಮಾರ್ ಮಾತನಾಡಿ, ಹಿಂದಿನ ಸರ್ಕಾರದಲ್ಲಿ ಚಾಲನೆಯಲ್ಲಿರುವ ಕಾರ್ಮಿಕರ ಕಲ್ಯಾಣ ಯೋಜನೆಯಡಿ ಆಟೋ-ಟ್ಯಾಕ್ಸಿ ಚಾಲಕರ ಮಕ್ಕಳ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹಧನ ವಿದ್ಯಾಸಿರಿ ಯೋಜನೆ ಮತ್ತು ವಾಣಿಜ್ಯ ವಾಹನ ಚಾಲಕರು ಅಪಘಾತಕ್ಕೆ ಒಳಪಟ್ಟಲ್ಲಿ ಆಸ್ಪತ್ರೆ ಚಿಕಿತ್ಸೆ ವೆಚ್ಚ 3 ಲಕ್ಷ ಹಾಗೂ ಮೃತಪಟ್ಟಲ್ಲಿ ಅವಲಂಭಿತರಿಗೆ ಪರಿಹಾರದನ 5 ಲಕ್ಷ ರೂಗಳ ವಾಣಿಜ್ಯ ವಾಹನ ಚಾಲಕರ ಅಪಘಾತ ಪರಿಹಾರ ನಿಧಿ ಯೋಜನೆಯೊಂದಿಗೆ 60 ವರ್ಷದ ನಂತರ ಪಿಂಚಣಿ ಯೋಜನೆಯನ್ನು ಪುನ: ಪ್ರಾರಂಭಿಸಬೇಕು. ಕನಿಷ್ಟ ಆಟೋ ಪ್ರಯಾಣದರ 30 ರೂ ನಿಗದಿಪಡಿಸಿ ಆರ್.ಟಿ.ಎ ಸಭೆ ಕರೆಯಬೇಕೆಂದು ಒತ್ತಾಯಿಸಿದರು.

Printed by: SUCHITHRA PRINTER's & PUBLISHER's,#378/379, MAYAGAPPA COMPLEX'' 1st Stage 6th phase Industrial Town West of Chord Road Rajajinagar Bengaluru 560044,karnataka.
Publised by: S.K.Wadeyar,#378/379, "MAYAGAPPA COMPLEX" 1st Stage 6th phase Industrial Town West of Chord Road Rajajinagar Bengaluru-560044,karnataka.
Owned by: S.K.Wadeyar,#378/379, "MAYAGAPPA COMPLEX" 1st Stage 6th phase Industrial Town West of Chord Road Rajajinagar Bengaluru-560044,karnataka.
Printed At :SUCHITHRA PRINTER's & PUBLISHER's,#378/379, MAYAGAPPA COMPLEX'' 1st Stage 6th phase Industrial Town West of Chord Road Rajajinagar Bengaluru 560044,karnataka.
Editor :S.K.Wadeyar,#378/379, "MAYAGAPPA COMPLEX" 1st Stage 6th phase Industrial Town West of Chord Road Rajajinagar Bengaluru-560044,karnataka.